ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

ಮುಂದಿನ ವರ್ಷ ಭಾರತ ಮತ್ತು ಶ್ರೀಲಂಕಾ ಜಂಟಿ ಆತಿಥ್ಯದಲ್ಲಿ ನಡೆಯಲಿರುವ ಐಸಿಐಸಿ ಟಿ-20 ವಿಶ್ವಕಪ್ ಟೂರ್ನಿಯ ವೇಳಾಪಟ್ಟಿ ಮಂಗಳವಾರ ಪ್ರಕಟವಾಗಿದ್ದು, ಫೆಬ್ರವರಿ 7 ರಿಂದ ಟೂರ್ನಿ ಆರಂಭವಾಗಲಿದೆ.



26 ನವೆಂಬರ್ 2025 ಬುಧವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 255 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಬೇಲೂರಿನಲ್ಲಿ 10 ಆಟೋ ನಿಲ್ದಾಣಗಳ ನಿರ್ಮಾಣ » 2



ಅಂಧ ಕ್ರಿಕೆಟ್ ಆಟಗಾರ್ತಿಯರಿಗೆ ನಗದು ಬಹುಮಾನ : ಸಿ.ಎಂ.



ಇಂದು ರಾಮನಾಥಪುರ ಸುಬ್ರಹ್ಮಣ್ಯ ಸ್ವಾಮಿ ರಥೋತ್ಸವ » 4

# ಮುಖ್ಯಮಂತ್ರಿ ಮಾಡುವಂತೆ ಯಾರನ್ನೂ ಕೇಳಿಲ್ಲ

## ನಾಯಕತ್ವ ಬದಲಾವಣೆ ಐದಾರು ಜನರ ನಡುವಿನ ಗುಟ್ಟಿನ ವಿಚಾರ : ಡಿ.ಕೆ.ಶಿವಕುಮಾರ್

• ಪ್ರಜೋದಯ ವರದಿ

**ಬೆಂಗಳೂರು :** ನನ್ನನ್ನು ಮುಖ್ಯಮಂತ್ರಿ ಮಾಡಿ ಎಂದು ಯಾರನ್ನೂ ಕೇಳಿಲ್ಲ. ನಾಯಕತ್ವ ಬದಲಾವಣೆ ನಮ್ಮ ಐದಾರು ಜನರ ನಡುವಿನ ಗುಟ್ಟಿನ ವಿಚಾರ. ಇದನ್ನು ಬಹಿರಂಗ ಮಾಡುವುದಿಲ್ಲವೆಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರವಾಗಿ ಮಂಗಳವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್ ಗಾಂಧಿ ಚರ್ಚೆ ವಿಚಾರವಾಗಿ ಕನಕಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚರ್ಚೆ ಮಾಡುವ ವಿಚಾರ ನನಗೆ ಗೊತ್ತಿಲ್ಲ. ನನಗೆ ಈ ಬಗ್ಗೆ ಹೇಳಿಲ್ಲ. ನಾನು ಆತ್ಮಸಾಕ್ಷಿಯನ್ನು ನಂಬಿದ್ದೇನೆ. ಆತ್ಮಸಾಕ್ಷಿಗೆ ತಕ್ಕಂತೆ ಕೆಲಸ ಮಾಡಬೇಕು. ಪಕ್ಷಕ್ಕೆ ಮುಜುಗರ ತರಲು, ಪಕ್ಷವನ್ನು ದುರ್ಬಲಗೊಳಿಸಲು ನನಗೆ ಇಷ್ಟ ವಿಲ್ಲ. ಪಕ್ಷ ಇದ್ದರೆ ನಾವೆಲ್ಲ, ಪಕ್ಷವನ್ನು ನಾನು ವೀಕ್ ಮಾಡುವುದಿಲ್ಲ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ



ಅವರು ಹಿರಿಯ ನಾಯಕರು, ನಮ್ಮ ಪಕ್ಷದ ಆಸ್ತಿ. ಅವರು ಮುಖ್ಯಮಂತ್ರಿಯಾಗಿ ಏಳೂವರೆ ವರ್ಷಗಳ ಕಾಲ ಅಧಿಕಾರ ನಡೆಸಿದ್ದಾರೆ. ಮುಂದಿನ ಬಜೆಟ್ ಅನ್ನು ಅವರೇ ಮಂಡಿಸುವುದಾಗಿ ಹೇಳಿದ್ದಾರೆ. ಬಹಳ ಸಂತೋಷ. ಅವರು ವಿರೋಧ ಪಕ್ಷದ ನಾಯಕರಾಗಿ ಶ್ರಮಿಸಿದ್ದಾರೆ, ಪಕ್ಷ ಕಟ್ಟಿದ್ದಾರೆ. ನಾವೆಲ್ಲರೂ ಸೇರಿ 2028 ಹಾಗು 2029ರ ಚುನಾವಣೆ ಗುರಿಯತ್ತ ಗಮನ ಹರಿಸಬೇಕೆಂದು ಹೇಳಿದರು.

ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಬೇಕೆಂದು ಅಭಿಮಾನಿಗಳು ಪೂಜೆ ಸಲ್ಲಿಸುತ್ತಿರುವ ಬಗ್ಗೆ ಪ್ರತಿಕ್ರಿಯಿಸಿ, ನನಗೆ ಅಧಿಕಾರ ಸಿಗಲಿ ಎಂದು ಈಗ ಪೂಜೆ ಮಾಡುತ್ತಿರು

> ನಾಯಕತ್ವ ಬದಲಾವಣೆ ವಿಷಯವು ಸಾರ್ವಜನಿಕವಾಗಿ ಚರ್ಚಿಸಬೇಕಾದ ವಿಷಯವಲ್ಲ. ಬೇರೆಲ್ಲಿಯೂ ಚರ್ಚಿಸುವುದಿಲ್ಲ, ಸಭೆ ನಡೆದರೆ, ಅಲ್ಲಿ ನಾವು ಚರ್ಚಿಸುತ್ತೇವೆ.
>
> - ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಅಧ್ಯಕ್ಷ

ವುದಕ್ಕಿಂತ, ನಾನು ಜೈಲಿಗೆ ಹೋದಾಗ ನನ್ನ ತಾಯಂದಿರು, ಯುವಕರು, ಹಿರಿಯರು ದೇವಾಲಯದ ಅರ್ಚಕರು ಮಾಡಿದ ಪ್ರಾರ್ಥನೆಯನ್ನು ಮರೆಯಲು ಸಾಧ್ಯವಿಲ್ಲ. ಬಿಜೆಪಿ ಅವಧಿಯಲ್ಲಿ ನಾನು ಜೈಲಿಂದ ಬಿಡುಗಡೆಯಾದಾಗ ಪೊಲೀಸರ ಬೆದರಿಕೆಗೂ ಹಿಂಜರಿಯದೇ ನನ್ನನ್ನು ಜನರು ಸ್ವಾಗತಿಸಿದರು. ನಾನು ಜೈಲಲ್ಲಿ ಇದ್ದಾಗ ಕರವೇ ನಾರಾಯಣ ಗೌಡರಿಗೆ ಪ್ರತಿಭಟನೆ ನಡೆಸದಂತೆ ಪೊಲೀಸ್ ಅಧಿಕಾರಿ ಭಾಸ್ಕರ್ ರಾವ್ ಅವರು ಬೆದರಿಕೆ ಹಾಕಿದ್ದರು. ಕೆಲವು ಸ್ವಾಮೀಜಿಗಳು ಬಂದರು, ಕೆಲವರು ಬರಲಿಲ್ಲ. ಚನ್ನಪಟ್ಟಣದಲ್ಲಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರ ಸ್ವಾಮಿ ಬೇರೆ ಹೇಳಿಕೆ ಕೊಟ್ಟರು. ಅನೇಕರು ನಮ್ಮ ಮನೆಗೆ ಬಂದು ನನ್ನ ಪತ್ನಿ ಹಾಗು ಮಕ್ಕಳ ಜೊತೆ ಮಾತನಾಡಿ ಧೈರ್ಯ ತುಂಬಿದ್ದರು. ಅಂದು ಜನ ಹರಕೆ ಹೊತ್ತು ಪ್ರಾರ್ಥಿಸಿದ್ದರು. ಆಗ ಕಟ್ಟಿಕೊಂಡ ಹರಕೆ ಮುಗಿಸಲು ಇನ್ನೂ ನನಗೆ ಆಗುತ್ತಿಲ್ಲ. ಅನೇಕರು ನಾನು ಬಿಡುಗಡೆಯಾಗುವವರೆಗೂ ಕಾಲಿಗೆ ಚಪ್ಪಲಿ ಹಾಕಿರಲಿಲ್ಲ. ನಾನು ಇಂದು ಡಿಸಿಎಂ ಆಗಿದ್ದು, ಪಕ್ಷದ ಅಧ್ಯಕ್ಷ ನಾಗಿದ್ದೇನೆ. ಕಷ್ಟಕಾಲದಲ್ಲಿದ್ದಾಗ ಮಾಡಿದ ಪ್ರಾರ್ಥನೆ, ಆಗ ಅವರು ನನಗೆ ಆತ್ಮಸ್ಥೈರ್ಯ ತುಂಬಿದ್ದು, ನನಗೆ ಬಹಳ ವಿಶೇಷ ಎಂದು ನುಡಿದರು.

ನಾನು ಚುನಾವಣೆ ಸಂದರ್ಭದಲ್ಲಿ ಮಹದೇವಪ್ಪ ಅವರ ಕ್ಷೇತ್ರ, ಮಂಡ್ಯ ಸೇರಿ ಎಲ್ಲಾ ಕಡೆಗಳಲ್ಲಿ ನನ್ನ ಮುಖ ನೋಡಿ ಮತ ಹಾಕಿ ಎಂದು ಕೇಳಿದ್ದೇನೆ. ಜನರು ನಮ್ಮ ಸಾಮೂಹಿಕ ನಾಯಕತ್ವಕ್ಕೆ ಮತ ಹಾಕಿದ್ದಾರೆ. ನನ್ನೊಬ್ಬನಿಗಾಗಿ ಮತ ಹಾಕಿದ್ದಾರೆ ಎಂದು ನಾನು ಹೇಳುವುದಿಲ್ಲ. 224 ಕ್ಷೇತ್ರಗಳಲ್ಲಿ ನಮಗಿಂತ ನಮ್ಮ ಕಾರ್ಯಕರ್ತರು ಹೆಚ್ಚು ಶ್ರಮ ಹಾಕಿದ್ದಾರೆಂದರು.

### ಗೊಂದಲಗಳಿಗೆ ಹೈಕಮಾಂಡ್ ತೆರೆ ಎಳೆಯಲಿ : ಸಿಎಂ



ರಾಜ್ಯದಲ್ಲಿ ಉಂಟಾಗಿರುವ ಎಲ್ಲಾ ಗೊಂದಲಗಳಿಗೆ ತೆರೆ ಎಳೆಯಲು ಹೈಕಮಾಂಡ್ ತೀರ್ಮಾನಿಸಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವ ಸಂಪುಟ ವಿಸ್ತರಣೆಯನ್ನು ಪಕ್ಷದ ವರಿಷ್ಠರು ಸೂಚನೆ ನೀಡಿದಾಗ ಕೈಗೊಳ್ಳಲಾಗುವುದು, ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡುವ ಇರಾದೆ ಸದ್ಯಕ್ಕೆ ಇಲ್ಲ. ಶಾಸಕರಿಗೆ ಅವರ ಅಭಿಪ್ರಾಯ ತಿಳಿಸುವ ಸ್ವಾತಂತ್ರ್ಯ ಇದೆ. ಪಕ್ಷದ ವರಿಷ್ಠರು ಏನು ಹೇಳುತ್ತಾರೆ ಎಂಬುದನ್ನು ನೋಡೋಣವೆಂದು ತಿಳಿಸಿದರು.

# ಗೋಪೂಜೆಯಿಂದ ಮನುಕುಲಕ್ಕೆ ಪುಣ್ಯಪ್ರಾಪ್ತಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಗೋವುಗಳಿಗೆ ಪೂಜೆ ಸಲ್ಲಿಸಿದರೆ ಮುಕ್ಕೋಟಿ ದೇವತೆಗಳ ದರ್ಶನ ಪಡೆದಷ್ಟೇ ಪುಣ್ಯ ಸಿಗಲಿದೆ ಎಂದು ಆದಿಚುಂಚನಗಿರಿ ಪೀಠಾಧ್ಯಕ್ಷಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಅವರು ಹೇಳಿದರು.

ತಾಲ್ಲೂಕಿನ ಕುಂದೂರು ಮಠದಲ್ಲಿ ಬೆಳಿಗ್ಗೆ ಧ್ವಜಾರೋಹಣ ನೆರವೇರಿಸುವ ಮೂಲಕ ಶ್ರೀ ಸುಬ್ರಹ್ಮಣ್ಯ ಸ್ವಾಮಿ ಹಾಗೂ ಶ್ರೀ ರಂಗನಾಥಸ್ವಾಮಿಯ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ, ಗೋಪೂಜೆ ನೆರವೇರಿಸಿ ಆಶೀರ್ವಚನ ನೀಡಿದ ಅವರು, ಇತ್ತೀಚಿನ ದಿನಗಳಲ್ಲಿ ಆಧುನೀಕರಣ ಹೆಚ್ಚಿದಂತೆಲ್ಲಾ ಗೋವುಗಳ ಸಂಖ್ಯೆ ಕ್ಷೀಣಿಸುತ್ತಿದೆ. ಮನೆಯಲ್ಲಿ ಗೋವುಗಳನ್ನು ಸಾಕಿ ಸಲುಹಿದರೆ ಗೃಹದಲ್ಲಿ ಲಕ್ಷ್ಮಿ ನೆಲೆಸಲಿದ್ದು, ಬದುಕು ಶಾಂತಿ ಹಾಗೂ ನೆಮ್ಮದಿಯ ಗೂಡಾಗಲಿದೆ ಎಂದು ತಿಳಿಸಿದರು.

ಶ್ರೀಕ್ಷೇತ್ರಕ್ಕೆ ಆಗಮಿಸಿದ ಚುಂಚಶ್ರೀ ಅವರನ್ನು ಮಂಗಳವಾದ್ಯದೊಂದಿಗೆ ಸ್ವಾಗತಿಸಿದ ಭಕ್ತರು ಪಾದಪೂಜೆ ನೆರವೇರಿಸಿದರು. ಶ್ರೀ ರಂಗನಾಥ ಸ್ವಾಮಿ, ಶ್ರೀ ವಿಶ್ವನಾಥಸ್ವಾಮಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದರು. ದೇಗುಲದ ಮುಂಭಾಗದಲ್ಲಿ ರಥಕ್ಕೆ ನವ ಕಲಶಾರೋಹಣ ನೆರವೇರಿಸಿ ದರು.


ಶ್ರೀ ಕ್ಷೇತ್ರದ ಪ್ರಧಾನ ದೇವತೆ ಮೆಳೆಯಮ್ಮ, ಶ್ರೀ ರಂಗನಾಥಸ್ವಾಮಿ, ಶ್ರೀ ಸತ್ಯನಾರಾಯಣ ಸ್ವಾಮಿ, ಶ್ರೀ ಲಕ್ಷ್ಮೀದೇವಿ, ಶ್ರೀವಿಶ್ವನಾಥ, ಶ್ರೀ ಪಾರ್ವತಿ ಅಮ್ಮನವರು, ಶ್ರೀ ಸುಬ್ರಹ್ಮಣ್ಯಸ್ವಾಮಿ ಹಾಗೂ ಪರಿವಾರ ದೇವರುಗಳು ಮತ್ತು ಕ್ಷೇತ್ರದ ಹಿಂದಿನ ಪೀಠಾಧಿಪತಿಗಳ ಸ್ಮರಣೆಯೊಂದಿಗೆ ಧಾರ್ಮಿಕ ವಿಧಿ ವಿಧಾನಗಳು ನೆರವೇರಿದವು. ಆದಿಚುಂಚನಗಿರಿ ಹಾಸನ ಶಾಖಾ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ಮೈಸೂರು ಶಾಖಾ ಮಠದ ಶ್ರೀ ಸೋಮೇಶ್ವರನಾಥ ಸ್ವಾಮೀಜಿ, ಬೆಂಗಳೂರಿನ ಹುಳಿಮಾವು ಶಾಖಾ ಮಠದ ಶ್ರೀ ಶೈಲನಾಥಸ್ವಾಮೀಜಿ, ಸುತ್ತ ಮುತ್ತಲ ಗ್ರಾಮಸ್ಥರು ಪಾಲ್ಗೊಂಡಿದ್ದರು.



### ಇಂದಿನ ಕಾರ್ಯಕ್ರಮಗಳು

ನ.26 ರಂದು ಕ್ಷೇತ್ರದಲ್ಲಿ ಸಂಜೆ 4.30 ಗಂಟೆಗೆ ಶ್ರೀ ಸುಬ್ರಹ್ಮಣ್ಯಸ್ವಾಮಿ ರಥೋತ್ಸವ ಹಾಗೂ ಸರ್ಪವಾಹನೋತ್ಸವ ಜರುಗಲಿದೆ. ಉಪವಾಸ ವ್ರತ ಆಚರಿಸುವ ಸುತ್ತಲಿನ ಗ್ರಾಮಸ್ಥರು ಕ್ಷೇತ್ರಕ್ಕೆ ಆಗಮಿಸಿ ಪೂಜೆ ಸಲ್ಲಿಸುವರು. ಅದೇ ದಿನ ಸಂಜೆ 6.30ಕ್ಕೆ ಆಯೋಜಿಸಿರುವ ಧಾರ್ಮಿಕ ಸಮಾರಂಭದಲ್ಲಿ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಸಾನ್ನಿಧ್ಯವಹಿಸುವರು. ನ.27 ರಂದು ಶ್ರೀ ರಂಗನಾಥಸ್ವಾಮಿಯ ರಥೋತ್ಸವ ಮತ್ತು ಗರುಡೋತ್ಸವ ನಡೆಯಲಿದೆ. ಮೂರು ದಿನ ನಿತ್ಯಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ನ.28 ರಂದು ಕ್ಷೇತ್ರದ ಹಿಂದಿನ ಪೀಠಾಧ್ಯಕ್ಷರು ಪುಣ್ಯಾರಾಧನೆ ಹಾಗು ಗುರುಸಂಸ್ಮರಣೋತ್ಸವ ಏರ್ಪಡಿಸಲಾಗಿದೆ.

# ತರಕಾರಿ ಬೆಲೆಯಲ್ಲಿ ಭಾರೀ ಏರಿಕೆ



• ಪ್ರಜೋದಯ ವರದಿ

**ಹಾಸನ:** ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಹೈರಾಣಾಗಿರುವ ಸಾರ್ವಜನಿಕರಿಗೆ ತರಕಾರಿ ಬೆಲೆಗಳು ಗಗನಕ್ಕೇರಿದ್ದು, ಕೈ ಸುಡುವಂತಾಗಿದೆ.

ಹಿಂಗಾರು ಮಳೆ ವಿಳಂಬ, ರೋಗ ಬಾಧೆಯಿಂದ ಇಳುವರಿ ಕುಸಿದಿರುವುದು ಒಂದೆಡೆಯಾದರೆ ಮದುವೆ ಮತ್ತಿತರ ಶುಭ ಸಮಾರಂಭಗಳು ಹೆಚ್ಚಿರುವುದರಿಂದ ತರಕಾರಿಗೆ ಬೇಡಿಕೆ ಹೆಚ್ಚಾಗಿದೆ. ಹೀಗಾಗಿ ಟೊಮೆಟೊ ಸೇರಿ ಇತರ ತರಕಾರಿಗಳ ಬೆಲೆಯಲ್ಲಿ ವಿಪರೀತ ಹೆಚ್ಚಳ ಕಂಡು ಬಂದಿದೆ. ಟೊಮೆಟೊ ಸೇರಿ ಕಾಯಿಪಲ್ಲೆ, ಹಸಿರುಪಲ್ಲೆಗಳ ದರಗಳು ಹೆಚ್ಚಳವಾಗುತ್ತಿದ್ದು, ಬೆಲೆ ಕೇಳಿಸಿಕೊಳ್ಳುವ ಗ್ರಾಹಕರು ತಮ್ಮ ಹಣಕಾಸಿನ ಸ್ಥಿತಿಯನ್ನು ಅರಿತು ಖರೀದಿ ಪ್ರಕ್ರಿಯೆಯಲ್ಲಿ ತೊಡಗಿದ್ದಾರೆ.

ನಗರದ ಎಪಿಎಂಸಿ ಮಾರುಕಟ್ಟೆಯಲ್ಲಿ ತರಕಾರಿ ಕಡಿಮೆ ಬೆಲೆಗೆ ಸಿಗುತ್ತದೆಂದು ಧಾವಿಸುವ ಜನರಿಗೆ ಬೆಲೆ ಏರಿಕೆ ಬಿಸಿ ತಟ್ಟಿದೆ. ಕಳೆದ ಎರಡು ದಿನಗಳಿಂದ ಹಸಿರು ತರಕಾರಿ ಸೇರಿ ಎಲ್ಲಾ ಪದಾರ್ಥಗಳ ಬೆಲೆ ಗಗನಕ್ಕೇರಿದೆ. 15 ಕೆ.ಜಿ. ತೂಕದ ಟೊಮೆಟೊ 700 ರೂ. ಗಡಿ ಮೀರಿದ್ದರೆ ಕೆ.ಜಿ.ಗೆ 80 ರಿಂದ 90 ರೂ.ಗೆ ಮಾರಾಟವಾಗುತ್ತಿದೆ. ಮೆಂತೆ, ಸಾಂಬಾರ, ಕರಿಬೇವು ಸೊಪ್ಪು ವಾರದ ಹಿಂದಷ್ಟೇ 2 ರಿಂದ 4 ರೂ.ಗೆ ಸಿಗುತ್ತಿತ್ತು. ಆದರೀಗ 10 ರೂ. ದಾಟಿರುವುದು ಬೆಲೆ ಏರಿಕೆಯ ಬಿಸಿ ತಟ್ಟಿದೆ. ಆಲೂಗೆಡ್ಡೆ ಕೆ.ಜಿ.ಗೆ 40 ರೂ., ಹೀರೇಕಾಯಿ ಕೆ.ಜಿ.ಗೆ 80 ರೂ., ಬದನೆಕಾಯಿ 60 ರೂ., ಮೂಲಂಗಿ 60 ರೂ., ಕ್ಯಾರೆಟ್ 60 ರೂ., ಹಸಿರು ಮೆಣಸಿನಕಾಯಿ 80 ರೂ. ತಲುಪಿರುವುದು ಗ್ರಾಹಕರನ್ನು ಚಿಂತೆಗೆ ದೂಡಿದೆ. ಮುಂದಿನ ಒಂದು ವಾರದ ವರೆಗೆ ಬೆಲೆ ಏರಿಕೆ ಇರಲಿದ್ದು, ನಂತರ ಕಡಿಮೆಯಾಗಬಹುದು ಎನ್ನಲಾಗಿದೆ.

# ಎತ್ತಿನಹೊಳೆ ಯೋಜನೆಗೆ ತಡೆ : ಕೇಂದ್ರದ ನಡೆಗೆ ಆಕ್ಷೇಪ

## ಕಾಮಗಾರಿಗೆ ಮತ್ತಷ್ಟು ಸಂಕಷ್ಟ | ರೈತರಲ್ಲಿ ಹೆಚ್ಚಿದ ಗೊಂದಲ

• ಪ್ರಜೋದಯ ವರದಿ

**ಹಾಸನ:** ಎತ್ತಿನಹೊಳೆ ಯೋಜನೆ ಕಾಮಗಾರಿಗೆ ಕೇಂದ್ರ ಅರಣ್ಯ ಸಚಿವಾಲಯ ತಡೆಯೊಡ್ಡಿರುವುದಕ್ಕೆ ಸಾರ್ವಜನಿಕ ವಲಯದಲ್ಲಿ ಆಕ್ಷೇಪ ವ್ಯಕ್ತವಾಗಿದೆ.

ಕೇಂದ್ರ ಸರ್ಕಾರ ಎತ್ತಿನಹೊಳೆ ಯೋಜನೆ ವಿಚಾರದಲ್ಲಿ ರಾಜಕೀಯ ಮಾಡಿದಂತೆ ಕಾಣುತ್ತಿದೆ. ಡಿಪಿಆರ್ ಮಾಡುವಾಗ, ಕಾಮಗಾರಿಗೆ ಅನುಮೋದನೆ ನೀಡುವಾಗ ಕೇಂದ್ರದ ಕಣ್ಣಿಗೆ ಪರಿಹಾರಾತ್ಮಕ ಅರಣ್ಯೀಕರಣ ವಿಚಾರಗಳು ಬಿದ್ದಿರಲಿಲ್ಲವೇ ಎಂಬ ಪ್ರಶ್ನೆ ಎದ್ದಿದೆ. ಈ ನಡುವೆ ಯೋಜನೆಗೆ ಭೂಮಿ ನೀಡಿದ ಮತ್ತು ಯೋಜನೆಯ ಲಾಭ ಪಡೆಯುವ ಪ್ರದೇಶದ ರೈತರು ಮತ್ತು ಜನರಲ್ಲಿ ಗೊಂದಲ ಮತ್ತು ಆತಂಕ ಮನೆ ಮಾಡಿದೆ.

ನೀರಾವರಿ ತಜ್ಞ ಪರಶಿವಯ್ಯ ವರದಿ ಅನ್ವಯ ರಾಜ್ಯ ಸರ್ಕಾರ ಸಮುದ್ರ ಸೇರುತ್ತಿದ್ದ ಎತ್ತಿನಹೊಳೆ ನೀರನ್ನು ಪೂರ್ವಭಿಮುಖವಾಗಿ ತಿರುಗಿಸಿ, ಬಯಲು ಸೀಮೆಯ ಜಿಲ್ಲೆ ಗಳಿಗೆ ನೀರುಣಿಸುವ ಎತ್ತಿನಹೊಳೆ ಯೋಜನೆ ಈಗಾಗಲೇ ಮೊದಲ ಹಂತ ಮುಗಿದು ಎರಡನೇ ಹಂತ ಚಾಲ್ತಿಯಲ್ಲಿದೆ. ಇಂತಹ ಸಂದರ್ಭ ದಲ್ಲಿ ಕೇಂದ್ರ ಅರಣ್ಯ ಸಚಿವಾಲಯ ತಡೆ ನೀಡಿರುವುದರಿಂದ ಕಾಮಗಾರಿಗೆ ಮತ್ತಷ್ಟು ಸಂಕಷ್ಟ ಎದುರಾಗಿದೆ.

ಬರಪೀಡಿತ ಜಿಲ್ಲೆಗಳಿಗೆ ನೀರು ಹರಿಸಲು ಗುರುತ್ವಾಕರ್ಷಣೆ ಕಾಲುವೆ ನಿರ್ಮಾಣಕ್ಕೆ ಸಕಲೇಶಪುರ ತಾಲ್ಲೂಕಿ ನಲ್ಲಿ 34 ಎಕರೆ



ಅರಣ್ಯವನ್ನು ವಿಶ್ವೇಶ್ವರಯ್ಯ ಜಲನಿಗಮ 2016ರಲ್ಲಿ ಬಳಸಿಕೊಂಡಿತ್ತು. ಪರ್ಯಾಯವಾಗಿ ಪರಿಹಾರಾತ್ಮಕ ಅರಣ್ಯೀಕರಣಕ್ಕೆ ಚಳ್ಳಕೆರೆ ತಾಲ್ಲೂಕಿನ ವರವು ಕಾವಲ್‌ನ 34 ಎಕರೆ ಜಾಗ ಗುರುತಿಸಿತ್ತು. ಆ ಬಳಿಕ, ಅರಸೀಕೆರೆ ತಾಲ್ಲೂಕಿನ ಬಾಗೇಶಪುರದಲ್ಲಿ ಪರಿಹಾರಾತ್ಮಕ ಅರಣ್ಯೀಕರಣ ನಡೆಸುವುದಾಗಿ ತಿಳಿ ಸಿತ್ತು. ಇನ್ನೊಂದೆಡೆ, ಯೋಜನೆಗೆ ಹೆಚ್ಚುವರಿಯಾಗಿ 273 ಎಕರೆ ಅರಣ್ಯ ಬಳಕೆಗೆ ಈ ವರ್ಷದ ಆರಂಭದಲ್ಲಿ ಪ್ರಸ್ತಾವನೆ ಸಲ್ಲಿಸಿತ್ತು. ಈ ಪ್ರಸ್ತಾವನೆ ಯನ್ನು ಅರಣ್ಯ ಸಲಹಾ ಸಮಿತಿಯ 6ನೇ ಸಮಿತಿ ಸಭೆಯಲ್ಲಿ ಪರಾಮರ್ಶೆ ನಡೆಸಲಾಗಿತ್ತು. 34 ಎಕರೆ ಅರಣ್ಯ ಬಳಸಿದ್ದಕ್ಕೆ ಪರ್ಯಾಯವಾಗಿ ಪರಿಹಾ ರಾತ್ಮಕ ಅರಣ್ಯೀಕರಣ ನಡೆಸುವಂತೆ ಷರತ್ತು ವಿಧಿಸಲಾಗಿತ್ತು. ಈ ಷರತ್ತು ಗಳನ್ನು ನಿಗಮ ಉಲ್ಲಂಘಿಸಿದೆ. ಹೀಗಾಗಿ, ಹೆಚ್ಚುವರಿ ಅರಣ್ಯ ಬಳಕೆಗೆ ಸದ್ಯ ಅನುಮೋದನೆ ನೀಡುವುದಿಲ್ಲ ಎಂದು ಅರಣ್ಯ ಸಲಹಾ ಸಮಿತಿ ಸ್ಪಷ್ಟಪಡಿಸಿತ್ತು. ಈ ಷರತ್ತುಗಳನ್ನು ಪಾಲನೆ ಮಾಡುವಂತೆ ನಿಗ ಮಕ್ಕೆ ನಿರ್ದೇಶನ ನೀಡಿತ್ತು. ಷರತ್ತು ಉಲ್ಲಂ ಘನೆ ಮಾಡಿರುವುದೇ ಗೊಂದಲಕ್ಕೆ ಕಾರಣವಾಗಿದೆ.

### ದಾಖಲೆಗಳಲ್ಲಿ ವ್ಯತ್ಯಾಸ

ಕಾಡು ಬೆಳೆಸಲು ಈಗ ಗುರುತಿಸಿರುವ ಜಾಗವು 2017ರಲ್ಲೇ ಅರಣ್ಯ ಇಲಾಖೆಯ ಹೆಸರಿನಲ್ಲಿ ಖಾತೆ ಆಗಿದೆ. ಈ ಜಾಗವನ್ನು 2022ರಲ್ಲಿ ಡೀಮ್ಡ್ (ಪರಿಭಾವಿತ) ಅರಣ್ಯವೆಂದು ಗುರುತಿಸಲಾಗಿದೆ. ಇದರೊಂದಿಗೆ, ರಾಜ್ಯ ಅರಣ್ಯ ಇಲಾಖೆ ಒದಗಿಸಿರುವ ದಾಖಲೆಗಳಲ್ಲಿ ವ್ಯತ್ಯಾಸ ಇದೆ. ಯೋಜನೆಗೆ 34 ಎಕರೆ ಅರಣ್ಯ ಬಳಸಿದ್ದರೆ, ಪರಿಹಾರಾತ್ಮಕ ಅರಣ್ಯೀಕರಣಕ್ಕೆ 85 ಎಕರೆ ಅರಣ್ಯ ಗುರುತಿಸಲಾಗಿದೆ. ಇದು ಸಂಶಯಕ್ಕೆ ಎಡೆ ಮಾಡಿಕೊಟ್ಟಿದೆ.

ಬಾಗೇಶಪುರ ಗ್ರಾಮದಲ್ಲಿ ಈಗಾಗಲೇ ಪರಿಹಾರಾತ್ಮಕ ಅರಣ್ಯೀಕರಣ ನಡೆಸಲಾಗಿದ್ದು, ಇದಕ್ಕೆ ಘಟನೋತ್ತರ ಅನುಮೋದನೆ ನೀಡಬೇಕೆಂದು ರಾಜ್ಯ ಅರಣ್ಯ ಇಲಾಖೆ ಈ ವರ್ಷದ ಆಗಸ್ಟ್‌ನಲ್ಲಿ ಅರಣ್ಯ ಸಚಿವಾಲಯಕ್ಕೆ ಕೋರಿತ್ತು. ಈ ಪ್ರದೇಶದಲ್ಲಿ 2019-20ನೇ ಸಾಲಿನಲ್ಲೇ ಕಾಡು ಬೆಳೆಸಲಾಗಿದೆ ಎಂದು ಸ್ಪಷ್ಟಪಡಿಸಿತ್ತು.

**ಕೋರ್ಟ್‌ನಲ್ಲಿ ರೈತರ ಪ್ರಕರಣ**

2016ರಲ್ಲಿ ಎತ್ತಿನಹೊಳೆ ಯೋಜ ನೆಗೆ ಸರ್ಕಾರ ಚಾಲನೆ ನೀಡಿದೆ. ಆದರೀಗ ಯೋಜನೆಯ ಮೊತ್ತ 12,000 ಕೋ.ರೂ. ಇತ್ತು. ಈಗ 28, 000 ಕೋ.ರೂ.ಗೆ ಹೆಚ್ಚಿಸಿಕೊಂಡಿದೆ. ಈ ಹಿಂದೆ 2016ರಲ್ಲಿ ಯೋಜನೆಗೆ ಭೂಮಿ ಬಿಟ್ಟುಕೊಟ್ಟಿದ್ದ ರೈತರು ನಮಗೆ ಹೊಸ ನಿಯಮದಡಿ ಪರಿಹಾರ ಹಣವನ್ನು ಹೆಚ್ಚಿಗೆ ಕೊಡಿ ಎಂದು ಕೋರ್ಟ್‌ನಲ್ಲಿ ದಾವೆ ಹೂಡಿದ್ದಾರೆ.

ಈಗಾಗಲೇ ಎತ್ತಿನಹೊಳೆ ಯೋಜನೆಗೆ ಸಕಲೇಶಪುರ ತಾಲ್ಲೂಕಿನಿಂದ ತುಮಕೂರು ಜಿಲ್ಲೆಯವರೆಗೂ ಭೂಸ್ವಾಧೀನ ಆಗಿದೆ. ತುಮಕೂರು ಜಿಲ್ಲೆಯಲ್ಲಿ ಕಾಮಗಾರಿ ಮುಗಿದ ಬಳಿಕ ಗೊರವನಹಳ್ಳಿ ಮಾರ್ಗವಾಗಿ ಬೆಂಗಳೂರು ದಕ್ಷಿಣ ಜಿಲ್ಲೆಗೆ ಬಳಿಕ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಾಮಗಾರಿ ನಡೆಯಬೇಕು. ಈಗ ತಡೆಯಾಜ್ಞೆ ಹಿಂಪಡೆಯದೆ ಹೋದರೆ 2027ಕ್ಕೆ ಯೋಜನೆ ಪೂರ್ಣಗೊಳ್ಳುವುದು ಅನುಮಾನ ಎಂಬಂತಾಗಿದೆ.

**ಪರಿಕರಗಳ ಸಂಗ್ರಹಣೆ**

ವಿಶ್ವೇಶ್ವರಯ್ಯ ಜಲ ನಿಗಮ ಎತ್ತಿನಹೊಳೆ ಯೋಜನೆ ಕಾಮಗಾರಿಗೆ ಬೇಕಾದ ಅಗತ್ಯವಿರುವ ಪರಿಕರಗಳನ್ನು ಈಗಾಗಲೇ ಖರೀದಿಸಿ ಸಂಬಂಧಪಟ್ಟ ಸ್ಥಳಗಳಲ್ಲಿ ಸಂಗ್ರಹಿಸಿ ಇಟ್ಟುಕೊಂಡಿದೆ. ಸಮಸ್ಯೆ ಇರುವುದು ಕೇವಲ ಅರಣ್ಯ ಪ್ರದೇಶದಲ್ಲಿ ಮಾತ್ರ. ಹೀಗಾಗಿ ತಾಂತ್ರಿಕ ಬಿಕ್ಕಟನ್ನು ರಾಜ್ಯ ಸರ್ಕಾರದ ಜಲ ಸಂಪನ್ಮೂಲ ಇಲಾಖೆ ಮತ್ತು ನೀರಾವರಿ ತಜ್ಞರು ಕೇಂದ್ರದ ಜಲ ಸಲಹಾ ಸಮಿತಿ ಜೊತೆಗೆ ಮಾತುಕತೆ ಮಾಡಿ ಸಮಸ್ಯೆ ಪರಿಹರಿಸಬಹುದೆಂಬುದು ರೈತ ಹೋರಾಟಗಾರರು ಮತ್ತು ಜಲತಜ್ಞರ ಅಭಿಮತವಾಗಿದೆ.

# ಹಣ ಕಳವಿಗೆ ಖದೀಮರ ವಿಫಲ ಯತ್ನ

• ಪ್ರಜೋದಯ ವರದಿ

**ಸಕಲೇಶಪುರ:** ಆನ್‌ಲೈನ್‌ನಲ್ಲಿ ಹಣ ಕಳವಿಗೆ ಯತ್ನಿಸಿದ ಘಟನೆ ಇತ್ತೀಚೆಗೆ ನಡೆದಿದ್ದು, ತಕ್ಷಣವೇ ಸೈಬರ್ ಠಾಣೆಗೆ ದೂರು ಸಲ್ಲಿಸಿದ್ದರಿಂದ ಹಣ ಸುರಕ್ಷಿತವಾಗಿದೆ.

ಹಾನುಬಾಳು ಹೋಬಳಿ ಮಾವಿನಕೋಲು ಗ್ರಾಮದ ಗುಡ್ಡಪ್ಪ ಅವರು ಅಕ್ಟೋಬರ್ 6 ರಂದು ಬೆಳಿಗ್ಗೆ 10.30ರ ಸಮಯದಲ್ಲಿ ಸ್ನೇಹಿತರ ಮೊಬೈಲ್ ನಂಬರ್‌ಗೆ ರೀ ಚಾರ್ಜ್ ಮಾಡುವಂತೆ ತಿಳಿಸಿದ್ದರಿಂದ, ಸದರಿಯವರ ಏರ್ಟೆಲ್ ಕಂಪನಿಯ ರೀಚಾರ್ಜ್ ಮಾಡಲು ಹಣವನ್ನು ಹಾಕಿದ್ದು, ರೀಚಾರ್ಜ್ ಆಗದ ಕಾರಣ ಕಡಿತಗೊಂಡ ಹಣವನ್ನು ಮರಳಿ ಪಡೆಯುವ ಸಲುವಾಗಿ ಗೂಗಲ್‌ನಲ್ಲಿ ಏರ್‌ಟೇಲ್ ಕಂಪನಿಯ ಸಹಾಯವಾಣಿಗೆ ಕರೆ ಮಾಡಿದ್ದಾರೆ. ಕರೆ ಸ್ವೀಕರಿಸಿದ ವ್ಯಕ್ತಿಯು ಹಿಂದಿಯಲ್ಲಿ ಮಾತನಾಡುತ್ತಾ ನಿಮ್ಮ ಗೂಗಲ್ ಪೇ ಪಿನ್ ನಂಬರ್ ಒತ್ತುವಂತೆ ತಿಳಿಸಿದ್ದರಿಂದ ಪಿನ್ ನಂಬರ್ ಅನ್ನು ಒತ್ತಿದಾಗ ದಿಢೀರನೇ 58 ಸಾವಿರ ರೂ. ಹಾಗು ಕೆಲ ಹೊತ್ತಿನ ಬಳಿಕ ಮತ್ತೆ 4 ಸಾವಿರ ರೂ. ಕಡಿತಗೊಂಡಿದೆ. ತಾವು ಮೋಸ ಹೋಗಿರುವುದನ್ನು ಅರಿತ ಗುಡ್ಡಪ್ಪ 1930 ಸಹಾಯವಾಣಿಗೆ ಕರೆ ಮಾಡಿ ದೂರು ನೀಡಿದ್ದರಿಂದ ಹಣ ಫ್ರೀಜ್ ಆಗಿದೆ. ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮೊಬೈಲ್ ಹ್ಯಾಕ್ ಮಾಡಿ 1.24 ಲಕ್ಷ ರೂ. ವರ್ಗಾವಣೆ

• ಪ್ರಜೋದಯ ವರದಿ

**ಹಾಸನ:** ಮೊಬೈಲ್ ಹ್ಯಾಕ್ ಮಾಡಿ ಬ್ಯಾಂಕ್ ಖಾತೆಯಲ್ಲಿದ್ದ 1.24 ಲಕ್ಷ ರೂ. ಗುಳುಂ ಆಗಿರುವ ಘಟನೆ ನಗರದಲ್ಲಿ ನಡೆದಿದೆ. ಸತ್ಯಮಂಗಲ ಬಡಾವಣೆ ನಿವಾಸಿ ಚಲುವೇಗೌಡ ಹಣ ಕಳೆದು ಕೊಂಡಿ ದ್ದು, ಜುಲೈ 13ರಂದು ಮೊಬೈಲ್ ನೋಡುತ್ತಿದ್ದಾಗ ಯಾವುದೋ ಎಪಿಕೆ ಫೈಲ್ ಮೇಲೆ ಕ್ಲಿಕ್ ಮಾಡಿದಾಗ ಮೊಬೈಲ್ ಹ್ಯಾಕ್ ಆಗಿದೆ. ಫೈಲ್ ಡೌನ್ ಲೋಡ್ ಆಗುತ್ತಿದ್ದಂತೆ ಎಸ್‌ಬಿಐ ಬ್ಯಾಂಕ್ ಖಾತೆಯಲ್ಲಿದ್ದ 1.24 ಲಕ್ಷ ರೂ. ಅಪರಿಚಿತ ವ್ಯಕ್ತಿಗೆ ವರ್ಗಾವಣೆಯಾಗಿದೆ. ಸಿಇಎನ್ ಠಾಣೆ ಯಲ್ಲಿ ಪ್ರಕರಣ ದಾಖಲಾಗಿದೆ.

# ಗ್ಯಾರಂಟಿಗೆ ಹಣ ಹೊಂದಿಸಲು ಅಭಿವೃದ್ಧಿ ನಿರ್ಲಕ್ಷ್ಯ

## ರಾಜ್ಯ ಸರ್ಕಾರದ ಧೋರಣೆ ವಿರುದ್ಧ ಬಿಜೆಪಿ ಪ್ರತಿಭಟನೆ: ಸಿಮೆಂಟ್ ಮಂಜು

• ಪ್ರಜೋದಯ ವರದಿ

**ಹಾಸನ:** ರಾಜ್ಯ ಸರ್ಕಾರ ಗ್ಯಾರಂಟಿ ಭಾಗ್ಯಗಳನ್ನು ಕರುಣಿಸಿ, ಅದಕ್ಕಾಗಿ ಹಣ ಹೊಂದಿಸಲು ಅಭಿ ವೃದ್ಧಿಯನ್ನೇ ನಿರ್ಲಕ್ಷ್ಯ ಮಾಡಿದ್ದಾರೆ. ಸರ್ಕಾರದ ಈ ಧೋರಣೆ ವಿರುದ್ಧ ಬಿಜೆಪಿಯಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಅವರು ತಿಳಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರನ್ನು ಸಂಪೂರ್ಣ ಕಡೆಗಣಿಸಿದೆ. ಅತಿವೃಷ್ಟಿಯಿಂದ ಅಪಾರ ಪ್ರಮಾಣದ ಹಾನಿ ಸಂಭವಿಸಿದರೂ ಸೂಕ್ತ ಪರಿಹಾರ ನೀಡಿಲ್ಲ. ಅತಿ ಹೆಚ್ಚು ಮಳೆ ಬಂದು ಬೆಳೆ ಜೊತೆಗೆ ಆಸ್ತಿಪಾಸ್ತಿ ನಷ್ಟವಾಗಿ ಅನ್ನದಾತ ಸಂಕಷ್ಟಕ್ಕೆ ಸಿಲುಕಿದ್ದಾನೆ.





ಆದರೂ ರಾಜ್ಯ ಸರ್ಕಾರ ಸೂಕ್ತ ಪರಿಹಾರ ನೀಡಿಲ್ಲ. ಹಾಲು ಉತ್ಪಾದಕರಿಗೆ 620 ಕೋ.ರೂ. ಬಾಕಿ ಬಿಡುಗಡೆಗೆ ಇನ್ನೂ ಮೀನಾಮೇಷ ಎಣಿಸುತ್ತಿದೆ ಎಂದು ಆರೋಪಿಸಿದರು.


ಹಲವು ಬೆಳೆಗಳಿಗೆ ಬೆಂಬಲ ಬೆಲೆ ನೀಡಲು ಸತಾಯಿಸಲಾಗುತ್ತಿದೆ. ಕೇಂದ್ರ ಸರ್ಕಾರ ಪಿಎಂ ಕಿಸಾನ್ ಯೋಜನೆಯಡಿ ರೈತರಿಗೆ ಅನುಕೂಲ ಮಾಡುತ್ತಿದ್ದರೆ, ಈ ಸರ್ಕಾರ ಆರ್ಥಿಕ ಸಹಾಯ ಮಾಡುವುದನ್ನೇ ನಿಲ್ಲಿಸಿದೆ. ಗ್ಯಾರಂಟಿ ಭಾಗ್ಯ ಕರುಣಿಸಿ, ಅದಕ್ಕಾಗಿ ಹಣ ಹೊಂದಿಸಲು ಅಭಿವೃದ್ಧಿಯನ್ನೇ ನಿರ್ಲಕ್ಷ್ಯ ಮಾಡಿದ್ದಾರೆ. ಸರ್ಕಾರದ ಈ ಧೋರಣೆ ಖಂಡಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಅವರು ಮಾತನಾಡಿ, ರಾಜ್ಯದಲ್ಲಿ ರೈತರ ಸಮಸ್ಯೆಗಳನ್ನು ಬಗೆಹರಿಸದ, ಅತಿವೃಷ್ಟಿಯಿಂದ ಆಗಿರುವ ಬೆಳೆನಷ್ಟಕ್ಕೆ ಸೂಕ್ತ ಪರಿಹಾರ ನೀಡದ ರಾಜ್ಯ ಸರ್ಕಾರದ ನಡೆ ಖಂಡಿಸಿ ಬಿಜೆಪಿ ವತಿಯಿಂದ ಜನಪರ ನೋಟ-ರೈತ ಪರ ಹೋರಾಟ ಹೆಸರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗುತ್ತಿದೆ. ನ.27 ಮತ್ತು 28 ರಂದು

» ನಾಲ್ಕನೇ ಪುಟದಲ್ಲಿ








"ವಿದ್ಯಾವಂತರಾಗಿ,
ಸಂಘಟಿತರಾಗಿ ಮತ್ತು ಉತ್ತೇಜಿತರಾಗಿರಿ....!"
-ಡಾ. ಬಿ.ಆರ್. ಅಂಬೇಡ್ಕರ್

# ಸಂವಿಧಾನ ದಿನಾಚರಣೆ

## ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವಕ್ಕಾಗಿ

**ಬೆಳಿಗ್ಗೆ 10.00 ಗಂಟೆಗೆ ವಿಧಾನಸೌಧದ ಭವ್ಯ ಮೆಟ್ಟಿಲುಗಳಿಂದ ಡಾ. ಬಿ.ಆರ್. ಅಂಬೇಡ್ಕರ್ ಭವನದವರೆಗೆ ಹಮ್ಮಿಕೊಂಡಿರುವ "ಕಾಲ್ನಡಿಗೆ ಜಾಥಾ" ಕ್ಕೆ ಮಾನ್ಯ ಸಮಾಜ ಕಲ್ಯಾಣ ಸಚಿವರಿಂದ ಚಾಲನೆ**



**ವೇದಿಕೆ ಕಾರ್ಯಕ್ರಮ**

ದಿನಾಂಕ: 26.11.2025 ರ ಬುಧವಾರ ಬೆಳಿಗ್ಗೆ 11.00 ಗಂಟೆಗೆ, ಸ್ಥಳ: ಡಾ. ಬಿ.ಆರ್. ಅಂಬೇಡ್ಕರ್ ಭವನ, ವಸಂತನಗರ, ಬೆಂಗಳೂರು

**ಉದ್ಘಾಟನೆ**

**ಶ್ರೀ ಸಿದ್ದರಾಮಯ್ಯ**
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

**ಘನ ಉಪಸ್ಥಿತಿ**

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ**
ಮಾನ್ಯ ಸಭಾಪತಿಗಳು,
ಕರ್ನಾಟಕ ವಿಧಾನ ಪರಿಷತ್ತು

**ಶ್ರೀ ಡಿ.ಕೆ. ಶಿವಕುಮಾರ್**
ಮಾನ್ಯ ಉಪ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

**ಶ್ರೀ ಯು.ಟಿ. ಖಾದರ್ ಫರೀದ್**
ಮಾನ್ಯ ಸಭಾಧ್ಯಕ್ಷರು,
ಕರ್ನಾಟಕ ವಿಧಾನಸಭೆ

**ಅಧ್ಯಕ್ಷತೆ**

**ಡಾ|| ಹೆಚ್.ಸಿ. ಮಹದೇವಪ್ಪ**
ಮಾನ್ಯ ಸಮಾಜ ಕಲ್ಯಾಣ ಸಚಿವರು, ಕರ್ನಾಟಕ ಸರ್ಕಾರ



ಮಾನ್ಯ ಸಮಾಜ ಕಲ್ಯಾಣ ಸಚಿವರಾದ **ಡಾ. ಹೆಚ್.ಸಿ. ಮಹದೇವಪ್ಪ** ಅವರು ಭಾರತದ ಸಂವಿಧಾನ ಪೀಠಿಕೆಯ ಕುರಿತು ಮಾತನಾಡುತ್ತಿರುವುದು.

**ಸರ್ವರಿಗೂ ಆದರದ ಸುಸ್ವಾಗತ**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/ ಕರ್ನಾಟಕ ವಾರ್ತೆ

ಬ್ರಾಹ್ಮಣ ಸಮುದಾಯ / ಹಿಂದುಳಿದ ವರ್ಗಗಳ ಮಾಲೀಕತ್ವದ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

ಒಂದು ತಿಂಗಳು ನಡೆಯುವ ಅದ್ದೂರಿ ಜಾತ್ರೆ । ಡಿ.26ಕ್ಕೆ ತಿಂಗಳ ಷಷ್ಠಿ ತೇರು

# ಇಂದು ರಾಮನಾಥಪುರ ಪ್ರಸನ್ನ ಸುಬ್ರಹ್ಮಣ್ಯ ಸ್ವಾಮಿ ರಥೋತ್ಸವ

• ಪ್ರಜೋದಯ ವರದಿ

**ಅರಕಲಗೂಡು:** ರಾಮನಾಥಪುರ ಐತಿ ಹಾಸಿಕ ಶ್ರೀ ಪ್ರಸನ್ನ ಸುಬ್ರಹ್ಮಣ್ಯಸ್ವಾಮಿ ದೇವಸ್ಥಾನದ ಮಹಾ ರಥೋತ್ಸವ ನ.26ರ ಬುಧವಾರ ನೆರವೇರಲಿದ್ದು, ಜಾತ್ರೆಯ ಸಡಗರ ಮೇಳೈಸಿದೆ.

ಕ್ಷೇತ್ರದಲ್ಲಿ ಒಂದು ತಿಂಗಳ ಕಾಲ ನಡೆಯುವ ಜಾತ್ರಾ ಮಹೋತ್ಸವದಲ್ಲಿ ಸಹಸ್ರಾರು ಭಕ್ತರು ಪಾಲ್ಗೊಳ್ಳುತ್ತಾರೆ. ಮೈಸೂರು ಸೀಮೆ ಭಾಗದಲ್ಲಿ ನಡೆಯುವ ಮೊದಲ ಜಾತ್ರಾ ಮಹೋತ್ಸವ ಎಂಬ ಪ್ರಸಿದ್ಧಿಗೆ ಪಾತ್ರವಾಗಿರುವ ರಾಮನಾಥಪುರ ಶ್ರೀ ಸುಬ್ರಹ್ಮಣ್ಯ ಸ್ವಾಮಿ ರಥೋತ್ಸವ ಯಶಸ್ಸಿಗೆ ದೇವಸ್ಥಾನ ಆಡಳಿತ ಮಂಡಳಿ ಹಾಗು ಗ್ರಾಮ ಪಂಚಾಯಿತಿ ಸಕಲ ಸಿದ್ಧತೆ ಮಾಡಿಕೊಂಡಿವೆ.

ಮಹಾ ರಥೋತ್ಸವ ನಂತರ ಮಾರ್ಗಶಿರ ಮಾಸದಲ್ಲಿ ಒಂದು ತಿಂಗಳ ಕಾಲ ನಡೆಯುವ ಷಷ್ಠಿ ಜಾತ್ರೆಗೆ ಶ್ರೀ ಕ್ಷೇತ್ರ ಸಜ್ಜುಗೊಂಡಿದೆ. ದೇವಸ್ಥಾನದಲ್ಲಿ ಈಗಾಗಲೇ ವಿಧ ಧಾರ್ಮಿಕ ಕಾರ್ಯಕ್ರಮಗಳಿಗೆ ಚಾಲನೆ ದೊರೆತಿದೆ. ಯಾಗಶಾಲಾ ಪ್ರವೇಶ, ಅಂಕುರಾರ್ಪಣ, ಮಯೂರ ವಾಹನೋತ್ಸವ, ಅಶ್ವ ವಾಹನೋತ್ಸವ, ಶೇಷ ವಾಹನೋತ್ಸವ, ಪಂಚಮಿ ಉತ್ಸವ, ಬೆಳ್ಳಿ ಪಲ್ಲಕ್ಕಿ ಉತ್ಸವ ನೆರವೇರಿಸಲಾಗಿದೆ. ಶನಿವಾರ ನಡೆಯುವ ಮಹಾ ರಥೋತ್ಸವಕ್ಕೆ 35 ಅಡಿ ಎತ್ತರದ ರಥ ಸಿಂಗಾರಗೊಳ್ಳುತ್ತಿದೆ. ಬೆಳಿಗ್ಗೆ ಪೂಜಾ ವಿಧಾನಗಳನ್ನು ಪೂರೈಸಿದ ಬಳಿಕ ಅಲಂಕೃತ ರಥದ ಮೇಲೆ ದೇವರ ಉತ್ಸವ ಮೂರ್ತಿ ಪ್ರತಿಷ್ಠಾಪಿಸಿ ಭಕ್ತರ ಸಂಭ್ರಮದ ನಡುವೆ ಮಧ್ಯಾಹ್ನ 12 ಗಂಟೆಗೆ ಅಭಿಜಿನ್ ಮುಹೂ ರ್ತದಲ್ಲಿ ಭಕ್ತರು ತೇರು ಎಳೆಯಲಿದ್ದಾರೆ.



### ದೇವಾಲಯ ಶೃಂಗಾರ

ಜಾತ್ರಾ ಮಹೋತ್ಸವ ಹೆಚ್ಚು ರಂಗು ಪಡೆದುಕೊಂಡಿದೆ. ದೇವಸ್ಥಾನವನ್ನು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಅಲಂಕರಿಸ ಲಾಗಿದೆ. ಒಳಾಂಗಣದಲ್ಲಿ ಆಕರ್ಷಕವಾದ ಹೂವಿನ ತೊರಣ ನಿರ್ಮಿಸಿ ದೇವಸ್ಥಾನವನ್ನು ಅಲಂಕರಿಸುವ ಕಾರ್ಯ ಸಾಗಿದೆ. ಷಷ್ಠಿ ಜಾತ್ರೆ ಪ್ರಯುಕ್ತ ದೇವಸ್ಥಾನದ ರಥ ಬೀದಿ ಹಾಗು ಶ್ರೀ ರಾಮೇಶ್ವರ ದೇವಾಲಯ ಬೀದಿಯಲ್ಲಿ ವಿವಿಧ ಜಾತ್ರೆ ವ್ಯಾಪಾರ ಮಳಿಗೆಗೆ ತಲೆ ಎತ್ತಿವೆ. ಸ್ಥಳೀಯ ಚುನಾಯಿತ ಪ್ರತಿನಿಧಿಗಳು ಹಾಗು ಗ್ರಾಮ ಪಂಚಾಯಿತಿ ವತಿಯಿಂದ ಸ್ವಚ್ಛತಾ ಕಾರ್ಯ ನಡೆಸಲಾಗಿದೆ. ವಾಹನ ದಟ್ಟಣೆ ನಿಯಂತ್ರಿಸಲು ಖಾಸಗಿ ಭೂಮಿಯಲ್ಲಿ ವಾಹನಗಳ ನಿಲುಗಡೆಗೆ ಪಾರ್ಕಿಂಗ್ ವ್ಯವಸ್ಥೆ, ತಾತ್ಕಾಲಿಕವಾಗಿ ಶೌಚಗೃಹ, ಕುಡಿಯುವ ನೀರಿನ ಸೌಲಭ್ಯ ಹಾಗು ಕಾವೇರಿ ನದಿಯ ಸ್ನಾನಘಟ್ಟಗಳಲ್ಲಿ ಹೂಳೆತ್ತಿ ಸ್ವಚ್ಛತಾ ಕಾರ್ಯ ನಡೆಸಲಾಗಿದೆ.

ಸುಕ್ಷೇತ್ರದ ಶ್ರೀ ರಾಮೇಶ್ವರ, ಅಗಸ್ತ್ಯೇಶ್ವರ, ಪಟ್ಟಾಭಿರಾಮ ಸೇರಿ ಅನೇಕ ದೇವನಸ್ಥಾನಗಳಿವೆ. ಅವುಗಳ ಪೈಕಿ ಶ್ರೀ ಪ್ರಸನ್ನ ಸುಬ್ರಹ್ಮಣ್ಯೇಶ್ವರ ದೇವಸ್ಥಾನ ಸಾಕಷ್ಟ ಭಕ್ತಗಣ ಹೊಂದಿದ್ದು, ಜಾತ್ರೆಯ ವೈಭಕ್ಕೆ ಮೆರಗು ನೀಡಲಿದೆ.

ದೇವಾಲಯದ ಐತಿಹಾಸಕ ಮಹತ್ವ: ಪ್ರಸನ್ನ ಸುಬ್ರಹ್ಮಣ್ಯಸ್ವಾಮಿ ದೇವಾಲಯ ನಿರ್ಮಾಣದ ಹಿಂದೆ ಐತಿಹ್ಯವಿದೆ. ಕುಕ್ಕೆ ಸುಬ್ರಹ್ಮಣ್ಯ ಮಠದ ಗುರು ಪರಂಪರೆಯ 14ನೇ ಶ್ರೀ ವಿಭುದೇಶ ತೀರ್ಥ ಪಾದಂಗಳ ವರು ಯಾತ್ರಾರ್ಥವಾಗಿ ಹೊರಟು ರಾಮ ನಾಥಪುರಕ್ಕೆ ಬಂದು ಇಲ್ಲಿಯ ಸಂಕ್ರಾಂತಿ ಮಂಟದಲ್ಲಿ ಬಿಡಾರ ಹೂಡಿದ್ದರು. ಆಗ ಕನಸಿನಲ್ಲಿ ಶ್ರೀ ಸುಬ್ರಹ್ಮಣ್ಯ ಬಂದು ಇಲ್ಲಿತನಕ ನಾನು ನಿನ್ನನ್ನು ಹಿಂಬಾಲಿಸಿದ್ದೇನೆ ನಾನು ಇಲ್ಲಿಯೇ ನೆಲೆಸಲು ಅಪೇಕ್ಷಿಸುತ್ತೇನೆ. ನಿನ್ನ ಬಳಿಗೆ ಬಲ್ಲಾಳರಾಯನನ್ನು ಎಚ್ಚರಿಸಿ ಇಲ್ಲಿಗೆ ಕಳಿಸುತ್ತೇನೆ. ಅವನ ಜೊತೆಗೆ ಹೊಳನರಸೀಪುರದ ಪಾಳೇಗಾರ ನರಸಪ್ಪ ನಾಯಕನ ಸಹಾಯದಿಂದ ನನ್ನನ್ನು ಇಲ್ಲಿ ಪ್ರತಿಷ್ಠಾಪಿಸುವಂತೆ ಹೇಳಿ ಹೊಳೆನರಸೀಪುರ ಪಾಳೇಯಗಾರ ನರಸಪ್ಪನಾಯಕನಿಗೂ ಕಾಣಿಕೊಂಡು, ರಾಮನಾಥಪುರದಲ್ಲಿ ಗುರುಗಳ ಇಚ್ಛೆಯಂತೆ ನಡೆದುಕೊಂಡರೆ ನಿನಗೆ ಸಂತಾನ ಪ್ರಾಪ್ತಿಯಾಗುವುದು ಎಂದು ಕಳುಹಿಸಿ ಶ್ರೀಗಳ ಮರ್ಗದರ್ಶನದಲ್ಲಿ ಶ್ರೀ ವಿಭುದೇಶ ತೀರ್ಥರು ಇಲ್ಲಿ ಸುಬ್ರಹ್ಮಣ್ಯ ಸ್ವಾಮಿ ಮೂರ್ತಿ ಪ್ರತಿಷ್ಠಾಪಿಸಿರುವ ಕುರಿತು ಇತಿಹಾಸದಲ್ಲಿ ಉಲ್ಲೇಖವಾಗಿದೆ.

ಈ ದೇವಾಲಯ ದ್ರಾವಿಡ ಶೈಲಿಯ ಲ್ಲಿದ್ದು, ಸಾಕಷ್ಟು ದೊಡ್ಡದಾದ ದೇವಾಲಯವಾಗಿದೆ. ಅಂದಿನಿಂದಲೂ ಜಾತ್ರೆ ಉತ್ಸವಗಳು ಇಲ್ಲಿ ನಡೆಯುತ್ತಿವೆ. ಪಂಚಮಿಯಂದು ರಥೋತ್ಸವ ನಡೆಯುತ್ತದೆ. ಮಾರ್ಗಶಿರ ಶುದ್ಧ ಷಷ್ಠಿಯಂದು ನಡೆಯುವ ರಥೋತ್ಸವ ಮೈಸೂರು ಸೀಮೆಯ ಜಾತ್ರೆಯ ಪೈಕಿ ರಾಮ ನಾಥಪುರದ ರಥೋತ್ಸವ ಪ್ರಥಮ ವಾಗಿದೆ. ರಥವನ್ನು ವಿವಿಧ ಅಲಂಕಾರಗಳಿಂದ ವರ್ಣ ರಂಜಿತವಾಗಿ ಅಲಂಕರಿಸಿ ತೇರಿನಲ್ಲಿ ಸುಬ್ರಹ್ಮಣ್ಯೇಶ್ವರ ಸ್ವಾಮಿಯನ್ನು ಪ್ರತಿಷ್ಠಾಪಿಸಿರುವುದನ್ನು ಕಣ್ತುಂಬಿಕೊಳ್ಳಲು ರಥ ಎಳೆಯುವುದನ್ನು ನೋಡಲು ಸಾವಿರಾರು ಯಾತ್ರಾರ್ಥಿಗಳು ಪಾಲ್ಗೊಂಡು ದೇವರ ದರ್ಶನಕ್ಕೆ ಪಾತ್ರರಾಗುತ್ತಾರೆ ಪೂಜಿಸುತ್ತಾರೆ.

ಮಹಾ ರಥೋತ್ಸವ ಜರುಗಿದ ದಿನದಿಂದ ಒಂದು ತಿಂಗಳವರೆಗೂ ಜಾತ್ರೆ ನಡೆಯುತ್ತದೆ. ನಂತರ ಡಿ. 26ರಂದು ತಿಂಗಳ ಷಷ್ಠಿ ತೇರು ಹರಿಯುತ್ತದೆ. ಏಪ್ರಿಲ್, ಮೇ ತಿಂಗಳ ವೈಶಾಖ ಮಾಸದಲ್ಲಿ ಇಂದ್ರಾಕ್ಷಮ ವಿಗ್ರಹದ ರಥೋತ್ಸವ ಇರುತ್ತದೆ. ಈ ಕ್ಷೇತ್ರದಲ್ಲಿ ಮಾಘ ಬಹುಳ ಮಹಾಶಿವರಾತ್ರಿ ಮರುದಿನ ಅಗಸ್ತ್ಯೇಶ್ವರ, ವೈಶಾಖ ಶುದ್ಧ ಮೃಗಶಿರ ನಕ್ಷತ್ರದಲ್ಲಿ ಪಟ್ಟಾಭಿ ರಾಮ ಮತ್ತು ವೈಶಾಖ ಶುದ್ಧ ಚತುರ್ದಶಿ ನರಸಿಂಹ ಜಯಂತಿಯನ್ನು ಆಚರಿಸಲಾಗುತ್ತದೆ.

ರಥೋತ್ಸವದ ಜಾತ್ರಾ ಸಮಯದಲ್ಲಿ ಸಹಸ್ರಾರು ಭಕ್ತರು ಕಾವೇರಿ ನದಿಯಲ್ಲಿ ಮಿಂದು ದೇವಸ್ಥಾನದ ಪೂಜಾ ಕಾರ್ಯದಲ್ಲಿ ಭಾಗಿಯಾಗುತ್ತಾರೆ. ತಿಂಗಳ ತೇರು ಕಳೆದರೂ ಜಾತ್ರೆ ಯ ಸಡಗರ ಕ್ಷೀಣಿಸುವುದಿಲ್ಲ. ಜಾತ್ರೆಯಲ್ಲಿ ಸಿಹಿ ತಿನಿಸುಗಳ ವ್ಯಾಪಾರಿ ಅಂಗಡಿಗಳು ತಲೆ ಎತ್ತಿವೆ.

## ಅಕ್ರಮ ಮಂಜೂರಾತಿ ವಜಾಗೊಳಿಸುವಂತೆ ಆಗ್ರಹ

• ಪ್ರಜೋದಯ ವರದಿ

**ಹಾಸನ:** ಬಗರ್ ಹುಕುಂ ಯೋಜನೆಯಡಿ ಸಕಲೇಶಪುರ ತಾಲ್ಲೂಕಿನ ಯಡೇಹಳ್ಳಿ ಗ್ರಾಮದಲ್ಲಿ ಹೊರಗಿನವರಿಗೆ ಅಕ್ರಮವಾಗಿ ಭೂಮಿ ಮಂಜೂರು ಮಾಡಲಾಗಿದೆ ಎಂದು ಜಿಲ್ಲಾ ಆದಿ ದ್ರಾವಿಡ ತುಳು ಸಮಾಜ ಸೇವಾ ಸಂಘದ ಅಧ್ಯಕ್ಷ ಬಿ. ಶಂಕರ್ ಅವರು ಆರೋಪಿಸಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿಕಾರಿಗಳು ಹಾಗು ಕೆಲ ಪ್ರಭಾವಿಗಳು ಸುಳ್ಳು ದಾಖಲೆ ಸೃಷ್ಟಿಸಿ, ಸ್ಥಳೀಯರಲ್ಲದ ವ್ಯಕ್ತಿಗೆ ಅನಧಿಕೃತವಾಗಿ ಸರ್ಕಾರಿ ಜಮೀನು ಹಂಚಿಕೆ ಮಾಡಿದ್ದಾರೆ. ಈ ಬಗ್ಗೆ ಕೂಡಲೇ ತನಿಖೆ ನಡೆಸಿ ಹೊರಗಿನವರಿಗೆ ನೀಡಿರುವ ಜಮೀನನ್ನು ರದ್ದು ಪಡಿಸದಿದ್ದರೆ ಹೋರಾಟ ಮಾಡುವು ದಾಗಿ ಎಚ್ಚರಿಕೆ ನೀಡಿದರು.

ಕಂದಾಯ ಇಲಾಖೆಯ ಕೆಲ ಅಧಿಕಾರಿಗಳು ಸುಳ್ಳು ದಾಖಲೆ ಸೃಷ್ಟಿಸಿ, ಮಹಾ ರಾಷ್ಟ್ರ ಮೂಲದ ಇಂದಿರಾ ಬಿ. ಅಮೀನ್ ಎಂಬುವವರಿಗೆ ಗ್ರಾಮದ 2 ಎಕರೆ10ಗುಂಟೆ ಜಮೀನನ್ನು ಮಂಜೂರು ಮಾಡಿದ್ದಾರೆ. ಇಂದಿರಾ ಅವರು ಕಳೆದ 70 ವರ್ಷಗಳಿಂದ ಮುಂಬೈನಲ್ಲಿ ವಾಸಿಸುತ್ತಿದ್ದು, ಯಡೇಹಳ್ಳಿಯಲ್ಲಿ ವಾಸ, ಆಧಾರ್, ರೇಷನ್ ಕಾರ್ಡ್, ಮತದಾರ ಗುರುತುಪತ್ರ ಯಾವುದೂ ಇಲ್ಲ ಎಂದು ದೂರಿದರು.

ಬೆಳಗೋಡು ಹೋಬಳಿ ಹಳೆಯ ಲೆಕ್ಕಾಧಿಕಾರಿ ಹಾಗೂ ರಾಜ್ಯಸ್ಥ ನಿರೀಕ್ಷಕ ಮೊದಲಾದವರು ನಕಲಿ ದಾಖಲೆ ಸೃಷ್ಟಿಸಿ ಅಕ್ರಮ ಮಂಜೂರಾತಿ ಮಾಡಿದ್ದಾರೆ. ಈ ಅಕ್ರಮದ ಬಗ್ಗೆ ದೂರು ನೀಡಿದರೂ ತಹಶೀಲ್ದಾರ್ ಯಾವುದೇ ಕ್ರಮ ಕೈಗೊಂಡಿಲ್ಲ. ಸದಾನಂದ ಎಂಬುವವರು ಉಪವಿಭಾಗಾಧಿಕಾರಿಗೆ ದೂರು ಸಲ್ಲಿಸಿದ್ದು, ಎಸಿ ಅವರು ಸ್ಥಳ ಪರಿಶೀಲಿಸಿ ವರದಿ ನೀಡುವಂತೆ ಹಿಂದೆಯೇ ತಹಶೀಲ್ದಾರ್‌ಗೆ ಆದೇಶ ನೀಡಿದ್ದರೂ, ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಹೇಳಿದರು.

ಬಗರ್ ಹುಕುಂ ಸಮಿತಿಗೆ ಸುಳ್ಳು ಮಾಹಿತಿ ನೀಡಿ ಮಾಡಿಸಿರುವ ಮಂಜೂರಾತಿಗೆ ತಕ್ಷಣ ತನಿಖೆ ನಡೆಸಬೇಕು. ಅಕ್ರಮ ಮಂಜೂರಾತಿ ವಜಾ ಮಾಡಿ ಸರ್ಕಾರದ ಜಮೀನನ್ನು ಸರ್ಕಾರದ ಸ್ವಾಧೀನಕ್ಕೆ ಹಿಂತೆಗೆದುಕೊಳ್ಳಬೇಕು. ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ತಹಶೀಲ್ದಾರ್ ಅವರನ್ನು ಅಮಾನತು ಮಾಡದಿದ್ದರೆ, ಜಿಲ್ಲಾಧಿಕಾರಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು. ಸಂಘದ ತಾಲ್ಲೂಕು ಅಧ್ಯಕ್ಷ ನಾರಾಯಣ, ಜಿಲ್ಲಾ ಸಂಚಾಲಕ ಸೋಮಶೇಖರ್, ಜಿಲ್ಲಾ ಸದಸ್ಯ ಸೀನಪ್ಪ, ತಾಲ್ಲೂಕು ಕಾರ್ಯದರ್ಶಿ ದಿನೇಶ್ ಇದ್ದರು.

## ಪ್ರತ್ಯೇಕ ಅಪಘಾತ: ಇಬ್ಬರ ಸಾವು

• ಪ್ರಜೋದಯ ವರದಿ

**ಹಾಸನ:** ಚನ್ನರಾಯಪಟ್ಟಣ ಸಂಚಾರ ಹಾಗು ಅರಸೀಕೆರೆ ಗ್ರಾಮಾಂತರ ಠಾಣೆ ವ್ಯಾಪ್ತಿಯಲ್ಲಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿರುವ ಘಟನೆ ನಡೆದಿದೆ.

ಅಪರಿಚಿತ ಕಾರು ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ಚನ್ನರಾಯಪಟ್ಟಣದ ಗೂರಮಾರನಹಳ್ಳಿ ಗೇಟ್ ಸಮೀಪ ನಡೆದಿದೆ. ಪಟ್ಟಣದ ಜೀವನ್‌ಗೌಡ (25) ಮೃತ ಯುವಕ. ನ.17ರ ರಾತ್ರಿ 12.30ರ ವೇಳೆ ರಸ್ತೆಯಲ್ಲಿ ಬರುತ್ತಿದ್ದಾಗ ಬೆಂಗಳೂರು ಕಡೆಯಿಂದ ವೇಗವಾಗಿ ಬಂದ ಕಾರು ಡಿಕ್ಕಿಯಾಗಿದೆ.ಗಂಭೀರ ಗಾಯಗೊಂಡಿದ್ದ ಜೀವನ್‌ಗೌಡ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆಗೆ ಸ್ಪಂದಿಸದೆ ಸೋಮವಾರ ಮೃತಪಟ್ಟಿದ್ದಾರೆ. ಚನ್ನರಾಯ ಪಟ್ಟಣ ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಕಾರು ಡಿಕ್ಕಿಯಾಗಿ ಬೈಕ್ ಸವಾರ ಅಸುನೀಗಿರುವ ಘಟನೆ ಅರಸೀಕೆರೆ ತಾಲ್ಲೂಕಿನ ರಾಮಸಾಗರ ಗೇಟ್ ಸಮೀಪ ನಡೆದಿದೆ.

ಮಲ್ಲೇಶ್ವರ ನಗರದ ಪಾಂಡು (40) ಮೃತರು. ಕೆಲಸ ಮುಗಿಸಿ ಮನೆಗೆ ಹೋಗುತ್ತಿದ್ದಾಗ ಅರಸೀಕೆರೆ ಕಡೆಯಿಂದ ವೇಗವಾಗಿ ಬಂದ ಕಾರು ಚಾಲಕ ಮುಂದೆ ಹೋಗುತ್ತಿದ್ದ ಕ್ಯಾಂಟರ್ ಓವರ್‌ಟೇಕ್ ಮಾಡಲು ರಸ್ತೆಯ ಬಲಭಾಗಕ್ಕೆ ತಿರುಗಿಸಿದ್ದರಿಂದ ಬೈಕ್‌ಗೆ ಡಿಕ್ಕಿಯಾಗಿದೆ. ಅಪ ಘಾತದ ರಭಸಕ್ಕೆ ಪಾಂಡು ಬೈಕ್ ಸಮೇತ ರಸ್ತೆ ಮೇಲೆ ಬಿದ್ದಿದ್ದರಿಂದ ಗಂಭೀರ ಗಾಯಗಳಾಗಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅರಸೀಕೆರೆ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಾರಿ ಕೇಳುವ ನೆಪದಲ್ಲಿ ಚಿನ್ನದ ಸರ ಕಳವು

**ಸಕಲೇಶಪುರ:** ಪ್ರವಾಸಿಗನ ನೆಪದಲ್ಲಿ ಬಂದ ಅಪರಿಚಿತ ಯುವಕ ದಾರಿ ಕೇಳುವ ನೆಪದಲ್ಲಿ ಮಹಿಳೆ ಕೊರಳಿಂದ 30 ಗ್ರಾಂ ತೂಕದ ಚಿನ್ನದ ಸರ ದೋಚಿ ಪರಾರಿಯಾಗಿರುವ ಘಟನೆ ತಾಲ್ಲೂಕಿನ ಕಲ್ಲಹಳ್ಳಿ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಪಾರ್ವತಮ್ಮ ಅವರು ಪರಿಚಯಸ್ಥರ ಮನೆಗೆ ಕಾಲ್ನಡಿಗೆಯಲ್ಲಿ ಹೋಗುತ್ತಿದ್ದಾಗ ಬೈಕ್‌ನಲ್ಲಿ ಬಂದ ಯುವಕ ತಾನು ಪ್ರವಾಸಕ್ಕೆ ಬಂದಿದ್ದು ಮಾಗೇರಿ ಕಡೆಗೆ ಹೋಗುವ ದಾರಿ ಯಾವುದೆಂದು ಕೇಳಿದ್ದಾನೆ. ಪಾರ್ವತಮ್ಮ ಅವರು ಎಡಗೈ ತೋರಿಸಿ ವಿಳಾಸ ಹೇಳುತ್ತಿದ್ದಾಗ ಏಕಾಏಕಿ ಕೊರಳಿಗೆ ಕೈ ಹಾಕಿ 30 ಗ್ರಾಂ ತೂಕದ ಚಿನ್ನದ ಮಾಂಗಲ್ಯ ಸರ ಕಿತ್ತುಕೊಂಡು ಬೈಕ್‌ನಲ್ಲಿ ಪರಾರಿಯಾಗಿದ್ದಾನೆ. ಕಳುವಾಗಿರುವ ಸರದ ಮೌಲ್ಯ 2.50 ಲಕ್ಷ ರೂ. ಆಗಿದೆ. ಯಸಳೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮನೆ ಬೀಗ ಮುರಿದು ಚಿನ್ನಾಭರಣ ಕಳವು

**ಸಕಲೇಶಪುರ:** ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಹಿಂಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ನಗದು ಸೇರಿ 95 ಸಾವಿರ ರೂ. ಮೌಲ್ಯದ ಚಿನ್ನಾಭರಣ ದೋಚಿರುವ ಘಟನೆ ತಾಲ್ಲೂಕಿನ ಬಾಳ್ಳುಪೇಟೆ ಗ್ರಾಮದಲ್ಲಿ ನಡೆದಿದೆ.

ಲಲಿತಾ ಎಂಬುವವರ ಮನೆಯಲ್ಲಿ ಸೋಮವಾರ ಕಳ್ಳತನ ನಡೆದಿದೆ. ಧರ್ಮಸ್ಥಳದಲ್ಲಿ ಹಮ್ಮಿಕೊಂಡಿದ್ದ ಪುತ್ರಿಯ ಮದುವೆ ಸಮಾರಂಭಕ್ಕಾಗಿ ಲಲಿತಾ ಹಾಗು ಕುಟುಂಬಸ್ಥರು ಮನೆಗೆ ಬೀಗ ಹಾಕಿಕೊಂಡು ನ.22 ರಂದು ತೆರಳಿದ್ದರು. ಮಾರನೇ ದಿನ ಸಂಜೆ ಬಂದು ನೋಡಿದಾಗ ಹಿಂಬಾಗಿಲಲ ಬೀಗ ಮುರಿದಿರುವುದು ಗೊತ್ತಾಗಿದೆ. ಬೀರುವಿನಲ್ಲಿಟ್ಟಿದ್ದ 2 ಗ್ರಾಂ ತೂಕದ ಒಂದು ಜೊತೆ ಚಿನ್ನದ ಓಲೆ, 10 ಸಾವಿರ ರೂ. ನಗದು, 5 ಗ್ರಾಂ ತೂಕದ ಚಿನ್ನದ ಒಂದು ಜೊತೆ ಓಲೆ, 4 ಗ್ರಾಂ ತೂಕದ ಚಿನ್ನದ ಒಂದು ಜೊತೆ ಓಲೆ, 6 ಗ್ರಾಂ ತೂಕದ ಚಿನ್ನದ ಉಂಗುರ ಕಳವು ಮಾಡಿದ್ದಾರೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



**ಹಾಸನ: ಚನ್ನರಾಯಪಟ್ಟಣದ ನವೋದಯ ವೃತ್ತದಲ್ಲಿ ಯುನಿಲೆಟ್‌ನ ಹೊಸ ಶಾಖೆಯನ್ನು ಸಂಸದ ಶ್ರೇಯಸ್ ಪಟೇಲ್ ಇತ್ತೀಚೆಗೆ ಉದ್ಘಾಟಿಸಿದರು. ಪುರಸಭೆ ಮಾಜಿ ಸದಸ್ಯ ಹಾಗು ಆರ್‌ಸಿ ಕ್ಲಬ್ ಅಧ್ಯಕ್ಷ ಸಿ.ಪಿ.ಕುಮಾರ್, ಜಿ.ಕೆ.ಹರೀಶ್, ಸಿ.ಎನ್.ರವಿಶಂಕರ್, ಜಿ.ಎಂ.ತಿಮ್ಮಣ್ಣ, ಕೆ.ರಾಧಾ ಕೃಷ್ಣ, ಸಿ.ಎನ್.ಮೋಹನ್, ಹೆಚ್.ಜಿ.ಲೋಕೇಶ್ ಇತರರಿದ್ದರು.**

## ಪುರ ಗ್ರಾಮದ ಕೆರೆ ದಿಡಗ ಗ್ರಾ.ಪಂ.ಗೆ ಹಸ್ತಾಂತರ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಸಾಮಾಜಿಕ ಸೇವೆಗಳಲ್ಲಿ ಕೆರೆ ಹೂಳೆತ್ತುವ ಯೋಜನೆಯು ಅತ್ಯಂತ ಯಶಸ್ವಿ ಕಾರ್ಯಕ್ರಮವಾಗಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಅವರು ಹೇಳಿದರು.

ತಾಲ್ಲೂಕಿನ ಪುರ ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಮ್ಮ ಊರು ನಮ್ಮ ಕೆರೆ ಯೋಜನೆಯಡಿ ಹೂಳೆತ್ತಲಾಗಿದ್ದ 900 ಕೆರೆಯನ್ನು ಗ್ರಾಮ ಪಂಚಾ ಯಿತಿಗೆ ಹಸ್ತಾಂತರ ಮಾಡುವ ಕಾರ್ಯಕ್ರಮದಲ್ಲಿ ಮಾತನಾಡಿ, ಡಾ.ಡಿ.ವೀರೇಂದ್ರ ಹೆಗ್ಗಡೆ ಯವರ ಈ ಒಂದು ಸಮಾಜಮುಖಿ ಕಾರ್ಯಕ್ರಮವು ಸಮಾಜಕ್ಕೆ ಮಾದರಿಯಾಗಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಸತೀಶ್ ಸುವರ್ಣ ಅವರು ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಮ್ಮಿಕೊಂಡಿರುವ ಸಾಮಾಜಿಕ ಕಳಕಳಿಯ ಕಾರ್ಯಗಳಲ್ಲಿ ಒಂದು ಗ್ರಾಮೀಣ ಮಟ್ಟದ ಊರ ಕೆರೆಯನ್ನು ಹೂಳೆತ್ತಿ ಪುನರ್ಜನ್ಮ ನೀಡಿ ಆ ಊರಿನ ಜಲ ಪೂರಣವನ್ನು ಹೆಚ್ಚಿಸಿ ಜನ ಜಾನುವಾರುಗಳಿಗೆ ಅನುಕೂಲವಾಗುವಂತೆ ಮಾಡುತ್ತಿರುವ ಈ ಕಾಯಕಕ್ಕೆ ಧರ್ಮಸ್ಥಳ ಶ್ರೀಗಳು ಪ್ರೋತ್ಸಾಹ ನೀಡುತ್ತಿದ್ದು ಅದರಿಂದಾಗಿ ಗ್ರಾಮಮಟ್ಟದ ಇಂತಹ ಕೆರೆಯು ಅಭಿವೃದ್ಧಿ ಕಾಣಲು ಸಾಧ್ಯ ಆಗಿದೆ ಎಂದರು.

ನಂತರ ಕೆರೆಯ ನಾಮಫಲಕ ಅನಾವರಣಗೊಳಿಸಿ ಸ್ಥಳೀಯ ಗ್ರಾಮ ಪಂಚಾಯಿತಿಗೆ ಹಸ್ತಾಂತರ ಪತ್ರವನ್ನು ಹಸ್ತಾಂತರಿಸಲಾಯಿತು. ಧರ್ಮಸ್ಥಳ ಶ್ರೀಗಳ 78ನೇ ವರ್ಷದ ಹುಟ್ಟು ಹಬ್ಬದ ಪ್ರಯುಕ್ತ ಶ್ರೀ ವೀರಭದ್ರೇಶ್ವರ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಯಿತು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಕೆ.ಎಸ್.ಪ್ರಕಾಶ್, ಕೆರೆ ಅಭಿವೃದ್ಧಿ ಸಮಿತಿ ಅಧ್ಯಕ್ಷ ಚಂದ್ರು, ಜಿಲ್ಲಾ ಜಾಗೃತಿ ವೇದಿಕೆ ಸದಸ್ಯ ಮಲ್ಲೇಗೌಡ, ಜಿಲ್ಲಾ ಜನ ಜಾಗೃತಿ ವೇದಿಕೆ ನಿಕಟ ಪೂರ್ವ ಅಧ್ಯಕ್ಷ ತೋಟಿ ಜಯರಾಮ್, ತಾಲ್ಲೂಕು ಯೋಜನಾಧಿಕಾರಿ ಶಾಲಿನಿ, ಪುರ ಕೆರೆ ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಶಿವಶಂಕರ್, ಸ್ಥಳೀಯ ಜನಪ್ರತಿನಿಧಿಗಳು, ಪುರಕೆರೆ ಅಭಿವೃದ್ಧಿ ಸಮಿತಿ ಸರ್ವ ಸದಸ್ಯರು, ಗಣ್ಯರು, ವಲಯ ಮೇಲ್ವಿಚಾರಕ ಹರೀಶ್, ಪ್ರಗತಿಬಂಧು ಸ್ವ-ಸಹಾಯ ಸಂಘಗಳ ಸದಸ್ಯರು, ತಾಲ್ಲೂಕಿನ ಕೃಷಿ ಮೇಲ್ವಿಚಾರಕರು, ಸೇವಾ ಪ್ರತಿನಿಧಿಗಳು ಹಾಜರಿದ್ದರು.

## ನಾಳೆ ಶ್ರೀ ರಾಮಸೇನೆ ಪದಾಧಿಕಾರಿಗಳ ಪದಗ್ರಹಣ




• ಪ್ರಜೋದಯ ವರದಿ

**ಹಾಸನ:** ಶ್ರೀ ರಾಮಸೇನೆ ರಾಜ್ಯಾಧ್ಯಕ್ಷ ಪ್ರಮೋದ್ ಮುತ್ತಾಲಿಕ್ ಹಾಗು ನೂತನ ರಾಜ್ಯ ತಂಡಕ್ಕೆ ಅಭಿನಂದನಾ, ಜಿಲ್ಲಾ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮವನ್ನು ನ.27ರಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ದಕ್ಷಿಣ ಪ್ರಾಂತ್ ಸಹ ಕಾರ್ಯದರ್ಶಿ ಜಾನೆಕೆರೆ ಹೇಮಂತ್ ಅವರು ಹೇಳಿದರು.

ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಮೋದ್ ಮುತ್ತಾಲಿಕ್ ಅವರ 70 ವರ್ಷಗಳ ಹಿಂದುತ್ವ ತಪಸ್ಸಿಗೆ ಗೌರವ ಸಲ್ಲಿಸುವ ಉದ್ದೇಶದಿಂದ ಈ ಸತ್ಕಾರವನ್ನು ಆಯೋಜಿಸಲಾಗಿದೆ. ಈ ಕಾರ್ಯಕ್ರಮಕ್ಕೆ ಗಣಪತಿ ಮಂಡಳಿಯ ಸದಸ್ಯರು ಹಾಗು ಹಿಂದೂ ಸಮಾಜದ ಪ್ರಮುಖ ಮುಖಂಡರೆಲ್ಲನ್ನು ಆಹ್ವಾನಿಸಲಾಗಿದೆ ಎಂದರು.

ಶಾಸಕ ಹೆಚ್.ಪಿ.ಸ್ವರೂಪ್ ಅವರು ಉದ್ಘಾಟಿಸುವರು. ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಕಾರ್ಲೆ ಮೊಗಣ್ಣೇಗೌಡ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ, ಮಾಜಿ ಮೇಯರ್ ಗಿರೀಶ್ ಚನ್ನವೀರಪ್ಪ, ಹಿಂದೂ ಸಮಾಜ ಮುಖಂಡ ಬಿ.ಎಂ. ಭುವನಾಕ್ಷ, ಲತೇಶ್ ಕುಮಾರ್ ಸೇರಿ ಹಲವರು ಆಗಮಿಸಲಿದ್ದಾರೆಂದು ತಿಳಿಸಿದರು.

ಶ್ರೀರಾಮ್ ಸೇನೆಯ ಮುಖಂಡರಾದ ಧರ್ಮನಾಯಕ್, ದರ್ಶನ್, ದೇವರಾಜ್, ವಿನಯ್ ಕೆರೇಹಳ್ಳಿ, ಜಗದೀಶ್ , ಮಹೇಶ್ ಹಾಜರಿದ್ದರು.

### ಗ್ಯಾರಂಟಿಗೆ ಹಣ ಹೊಂದಿಸಲು ಅಭಿವೃದ್ಧಿ ನಿರ್ಲಕ್ಷ್ಯ

» ಮೊದಲನೇ ಪುಟದಿಂದ

ಎಲ್ಲಾ ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಹೋರಾಟ ಹಮ್ಮಿಕೊಳ್ಳಲಾಗಿದೆ. ಡಿಸೆಂಬರ್ 2 ರಂದು ಜಿಲ್ಲಾ ಕೇಂದ್ರದಲ್ಲಿ ಪ್ರತಿಭಟನೆ ನಡೆಯಲಿದೆ. ಡಿ.8 ರಂದು ಬೆಳಗಾವಿ ಚಳಿಗಾಲದ ಅಧಿವೇಶನಕ್ಕೂ ಮುನ್ನ ರೈತಪರವಾದ ಹೋರಾಟ ಹಮ್ಮಿಕೊಳ್ಳಲಾಗಿದೆ. ವಿವಿಧ ಬೆಳೆಗಳಿಗೆ ಬೆಂಬಲ ಬೆಲೆ ಜೊತೆಗೆ ರೈತರ ಸಮಸ್ಯೆ ಬಗೆಹರಿಸುವುದು ನಮ್ಮ ಉದ್ದೇಶ ಎಂದರು.

ಕಬ್ಬಿಗೆ ಬೆಲೆಗೆ ಆಗ್ರಹಿಸಿ ರೈತರು ಹೋರಾಟ ಮಾಡಿದರು, ಈಗ ಮೆಕ್ಕೆಜೋಳಕ್ಕೆ ಬೆಂಬಲ ಬೆಲೆ ನೀಡಲು ಹೋರಾಟಕ್ಕೆ ರೈತರು ಸಜ್ಜಾಗುತ್ತಿದ್ದಾರೆ. ಒಟ್ಟಿನಲ್ಲಿ ಒಂದಲ್ಲ ಒಂದು ರೀತಿಯಲ್ಲಿ ರೈತರು ಸಮಸ್ಯೆ ಎದುರಿಸುತ್ತಿದ್ದಾರೆ. ಇದಕ್ಕೆ ಕಾರಣವಾಗಿರುವ ರಾಜ್ಯ ಸರ್ಕಾರದ ವಿರುದ್ಧ ಎರಡು ಹಂತಗಳಲ್ಲಿ ಬಿಜೆಪಿ ಹೋರಾಟ ಹಮ್ಮಿಕೊಳ್ಳಲು ನಿರ್ಧರಿಸಿದೆ ಎಂದರು.

ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಅಮಿತ್ ಶೆಟ್ಟಿ, ಗಿರೀಶ್ ನಂಬಿಹಳ್ಳಿ, ಜಿಲ್ಲಾ ರೈತಮೋರ್ಚಾ ಅಧ್ಯಕ್ಷ ನಾರಾಯಣಗೌಡ, ಮಾಧ್ಯಮ ಸಂಯೋಜಕ ನಾಗೇಶ್ ಇದ್ದರು.

## ನಗರದಲ್ಲಿ ಮುಂದುವರೆದ ರೈತರ ಪ್ರತಿಭಟನೆ

• ಪ್ರಜೋದಯ ವರದಿ



**ಹಾಸನ:** ಮೆಕ್ಕೆ ಜೋಳಕ್ಕೆ ಬೆಂಬಲ ಬೆಲೆ ಹೆಚ್ಚಿಸುವಂತೆ ಒತ್ತಾಯಿಸಿ ರೈತರು ನಡೆಸುತ್ತಿರುವ ಪ್ರತಿಭಟನೆ 2ನೇ ದಿನವಾದ ಮಂಗಳವಾರವೂ ಜಿಲ್ಲಾಧಿಕಾರಿ ಕಚೇರಿ ಎದುರು ಮುಂದುವರೆಯಿತು.

ಮೆಕ್ಕೆಜೋಳಕ್ಕೆ ಕೇಂದ್ರ ಸರ್ಕಾರ ನಿಗದಿಪಡಿಸಿದ ದರಕ್ಕೂ ಕಡಿಮೆ ಮಾರಾಟವಾಗುತ್ತಿದೆ. ಬೆಲೆ ಕುಸಿತದ ಸಂದರ್ಭದಲ್ಲಿ ಖರೀದಿ ಕೇಂದ್ರ ತೆರೆಯಬೇಕಿದ್ದರೂ, ಇನ್ನೂ ಜಿಲ್ಲಾ ಡಳಿತ ಅಗತ್ಯ ಕ್ರಮ ಕೈಗೊಂಡಿಲ್ಲ ವೆಂದು ರೈತರು ಆಕ್ರೋಶ ವ್ಯಕ್ತಪಡಿಸಿದರು.

ಹಾಸನ ಜಿಲ್ಲೆ ಹೈನುಗಾರಿಕೆಯಲ್ಲಿ ರಾಜ್ಯದಲ್ಲಿ ದ್ವಿತೀಯ ಸ್ಥಾನದಲ್ಲಿದ್ದು, ಪಶು ಆಹಾರಕ್ಕೆ ಅಗತ್ಯವಾಗಿ ರುವ ಮೆಕ್ಕೆಜೋಳ ಕೆಎಂಎಫ್ ಹೊರ ರಾಜ್ಯಗಳಿಂದ ದಲ್ಲಾಳಿಗಳ ಮುಖಾಂತರ ತರಿಸಿಕೊಳ್ಳುತ್ತಿರುವುದು ದೊಡ್ಡ ಸಮಸ್ಯೆಯಾಗಿದೆ. ರೈತರಿಂದಲೇ ಮೆಕ್ಕೆಜೋಳ ಖರೀದಿ ಮಾಡುವ ಬದಲಿಗೆ ಹೊರಜಿಲ್ಲೆ, ಹೊರರಾಜ್ಯಗಳ ಅವಲಂಬನೆ ಮುಂದುವರೆದಿದೆ. ಅದನ್ನು ತಕ್ಷಣ ನಿಲ್ಲಿಸಿ, ಸ್ಥಳೀಯ ರೈತರಿಗೆ ಆದ್ಯತೆಯಾಗಿ ಖರೀದಿ ಪ್ರಾರಂಭಿಸಬೇಕೆಂದು ಆಗ್ರಹಿಸಿದರು.

ರೈತ ಮುಖಂಡ ಕಣಗಾಲ್ ಮೂರ್ತಿ ಅವರು ಮಾತನಾಡಿ, ಅತಿವೃಷ್ಟಿ, ಬರಗಾಲದಿಂದ ತತ್ತರಿಸುತ್ತಿರುವ ರೈತರು, ಇದೀಗ ಕಳಪೆ ಮೆಕ್ಕೆಜೋಳ ಬೀಜದ ಪರಿಣಾಮ ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಾಲಸೋಲ ಮಾಡಿ ಎರಡೆರಡು ಬಾರಿ ಬಿತ್ತನೆ ಮಾಡಿದರೂ, ಬಂಡವಾಳ ವಾಪಾಸ್ ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ದಿಕ್ಕುತೋಚದ ರೈತರು ಆತ್ಮಹತ್ಯೆ ಹಾದಿ ತುಳಿಯುತ್ತಿದ್ದಾರೆಂದು ಆರೋಪಿಸಿದರು.

ರೈತ ಸಂಘದ ರಾಜ್ಯ ಅಧ್ಯಕ್ಷಿಯ ಮಂಡಳಿ ಸದಸ್ಯ ಗ್ಯಾರಂಟಿ ರಾಮಣ್ಣ ಮಾತನಾಡಿ, ರೈತರಿಗೆ ಆತ್ಮಸ್ಥೈರ್ಯ ತುಂಬಿ ರಕ್ಷಣೆ ನೀಡುವುದು ರಾಜ್ಯ ಮತ್ತು ಕೇಂದ್ರ ಸರ್ಕಾರದ ಕರ್ತವ್ಯವಾಗಿದ್ದರೂ, ಸರ್ಕಾರ ರೈತರ ಸಮಾಧಿಗಳ ಮೇಲೆ ಮಹಲ್ ಕಟ್ಟುವ ನೀತಿ ಅನುಸರಿಸುತ್ತಿದೆ. ರೈತ ಮುಖಂಡರಾದ ಬಳ್ಳೂರು ಉಮೇಶ್, ಬಿಟ್ಟಗೌಡನಹಳ್ಳಿ ಮಂಜು, ಮರ್ಕುಲಿ ಪ್ರಕಾಶ್, ಬೂವನೇಶ್, ಜಗದೀಶ್, ಶಿವಕುಮಾರ್, ಬೂಮೇಶ್ ಇದ್ದರು.

## ಮಕ್ಕಳ ಆಸಕ್ತಿ ಅರಿತು ಪ್ರೋತ್ಸಾಹಿಸುವ ಕೆಲಸವಾಗಲಿ

• ಪ್ರಜೋದಯ ವರದಿ



**ಆಲೂರು:** ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಲು ಪ್ರತಿಭಾ ಕಾರಂಜಿ ವೇದಿಕೆ ಸಹಕಾರಿಯಾಗಿದೆಂದು ಶಾಸಕ ಸಿಮೆಂಟ್ ಮಂಜು ಅವರು ಹೇಳಿದರು.

ತಾಲ್ಲೂಕಿನ ಪಾಳ್ಯ ಹೋಬಳಿ ಚಿಕ್ಕಕಣ ಗಾಲು ಗ್ರಾಮದ ಸರ್ಕಾರಿ ಪ್ರೌಢ ಶಾಲೆ ಆವರಣದಲ್ಲಿ ಕ್ಲಸ್ಟರ್ ಮಟ್ಟದ ಪ್ರೌಢಶಾಲಾ ವಿಭಾಗದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ಘಾಟಿಸಿ ಮಾತ ನಾಡಿ, ಪ್ರತಿ ಮಗುವಿನಲ್ಲೂ ಪ್ರತಿಭೆ ಇರುತ್ತದೆ. ಆ ಪ್ರತಿಭೆ ಗುರುತಿಸಿ ಹೊರತರಲು ಇಂತಹ ವೇದಿಕೆಗಳು ಸಹಕಾರಿ ಎಂದರು.

ಪಠ್ಯ ಮತ್ತು ಪಠ್ಯೇತರ ಚಟುವಟಿಕೆಯಲ್ಲಿ ಮಕ್ಕಳು ಹೆಚ್ಚು ಭಾಗವಹಿಸಬೇಕು. ಪ್ರೌಢ ಶಾಲೆಯ ಹಂತ ಶಿಕ್ಷಣಕ್ಕೆ ತಳಪಾಯ. ಇಲ್ಲಿ ಗಟ್ಟಿಯಾಗಿ ನಿಂತರೆ ಮುಂದೆ ಗಟ್ಟಿಯಾಗಿ ನಿಲ್ಲುವು ದಕ್ಕೆ ಸಾಧ್ಯ. ಈ ಹಂತದಲ್ಲಿರುವಾಗಲೇ ಮಕ್ಕಳಿಗೆ ಉತ್ತಮ ಶಿಕ್ಷಣದೊಂದಿಗೆ ಸಂಸ್ಕಾರ ಕಲಿಸ ಬೇಕು. ವಿದ್ಯಾರ್ಥಿಗಳು ಉತ್ತಮ ಶಿಕ್ಷಣದೊಂದಿಗೆ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು. ಮಕ್ಕಳಿಗಾಗಿ ಸಂಪತ್ತು ಸಂಗ್ರಹಿಸುವ ಬದಲು ಪೋಷಕರು ತಮ್ಮ ಮಕ್ಕಳಿಗೆ ಸಂಸ್ಕಾರ ಭರಿತ ಶಿಕ್ಷಣ ನೀಡಿ ಮಕ್ಕಳನ್ನೇ ರಾಷ್ಟ್ರದ ಅಮೂಲ್ಯ ಆಸ್ತಿಯನ್ನಾಗಿಸಬೇಕು. ಚಿಕ್ಕಕಣಗಾಲು ಸರ್ಕಾರಿ ಪ್ರೌಢಶಾಲೆಗೆ ನೂತನ ರಂಗ ಮಂದಿರ ನಿರ್ಮಾಣ ಮಾಡಲು ಅನುದಾನ ಮಿಸಲಿಡುವುದಾಗಿ ಭರವಸೆ ನೀಡಿದರು.

ಶಾಲೆಯ ಪ್ರಭಾರ ಮುಖ್ಯ ಶಿಕ್ಷಕ ರಘು ಅವರು ಮಾತನಾಡಿ, ಮಕ್ಕಳು ಮನೆಯ ನಂದಾ ದೀಪವಿದ್ದಂತೆ. ಭವಿಷ್ಯದ ಆಶಾ ಜ್ಯೋತಿಗಳು. ಅವರ ಬುದ್ದಿ ಚುರುಕುಗೊಳಿಸಿ ಸದೃಢರನ್ನಾಗಿಸುವ ಗುಣಮಟ್ಟದ ಶಿಕ್ಷಣ ಜೊತೆಗೆ ಅವರಿಗೆ ಸಾಂಸ್ಕೃತಿಕ ಚುಟುವಟಿಕೆಗಳಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಿಕೊಡುವುದು ಅತ್ಯಗತ್ಯವೆಂದರು.

2025-26ನೇ ಸಾಲಿನ ಪಾಳ್ಯ ಹೋಬಳಿ, ಕ್ಲಸ್ಟರ್ ಮಟ್ಟದ ಪ್ರೌಢ ಶಾಲಾ ವಿಭಾಗದ ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಚಿಕ್ಕಕಣಗಾಲು, ಕಣತೂರು, ಮಡಬಲು, ಕಾಮತಿ ಕೂಡಿಗೆ, ಬೆಟ್ಟಳ್ಳಿ ಕ್ರಾಸ್, ನೀಲಲೋಚನಾ ಪಾಳ್ಯ, ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆ, ಸೆಂಟ್ ಜೋಸೆಫ್ ಪ್ರೌಢ ಶಾಲೆ, ಕಿರಣ್ ಕಾನ್ವೆಂಟ್ ಕಣತೂರು ಶಾಲಾ ತಂಡಗಳು ಭಾಗವಹಿಸಿದ್ದವು.

ಶಾಸಕ ಸಿಮೆಂಟ್ ಮಂಜು, ಎಸ್‌ಡಿಎಂಸಿ ಅಧ್ಯಕ್ಷ ಕೃಷ್ಣಮೂರ್ತಿ, ಮಾಜಿ ಅಧ್ಯಕ್ಷ ಪರಮೇಶ್ವ ರಪ್ಪ, ಡೈರಿ ಅಧ್ಯಕ್ಷ ರವಿಪ್ರಕಾಶ್ ಅವರನ್ನು ಸನ್ಮಾನಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಶಾಸಕರು ಪ್ರಶಸ್ತಿ ಪತ್ರ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಎಸ್‌ಡಿಎಂಸಿ ಸದಸ್ಯರಾದ ಮಹೇ ಶ್ವರಯ್ಯ, ಆನಂದ್, ಗಂಗಾಧರ್, ಸ್ವಾಮಿ, ಲತಾ, ಸುಜಾತಾ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮಂಜುನಾಥ್, ರವಿ, ನೇತ್ರಾ ರಾಜಶೇಖರ್ ಇತರರಿದ್ದರು.

ದಿನದಾಂತ್ಯಕ್ಕೆ 27ಕ್ಕೆ 2 ವಿಕೆಟ್ । ಸೋಲಿನ ಭೀತಿಯಲ್ಲಿ ಭಾರತ

# ಸರಣಿ ಸ್ವೀಪ್‌ನತ್ತ ದಕ್ಷಿಣ ಆಫ್ರಿಕಾ

• ಪ್ರಜೋದಯ ವರದಿ




**ಗುವಾಹಟಿ:** ಆತಿಥೇಯ ಭಾರತ ವಿರುದ್ಧ ನಡೆಯು ತ್ತಿರುವ 2ನೇ ಹಾಗೂ ಅಂತಿಮ ಟೆಸ್ಟ್ ಪಂದ್ಯದಲ್ಲಿ ಭಾರತ ಗೆಲುವಿಗೆ ದಕ್ಷಿಣ ಆಫ್ರಿಕಾ ತಂಡ 549 ರನ್‌ಗಳ ಬೃಹತ್ ಟಾರ್ಗೆಟ್ ನೀಡಿದೆ. ಅದಕ್ಕೆ ಉತ್ತರ ವಾಗಿ ಬ್ಯಾಟಿಂಗ್ ಆರಂಭಿಸಿದ ಭಾರತ 4ನೇ ದಿನದಾಟದ ಅಂತ್ಯಕ್ಕೆ 2 ವಿಕೆಟ್ ಕಳೆದುಕೊಂಡು 27 ರನ್ ಗಳಿಸಿದೆ.

2ನೇ ಇನಿಂಗ್ಸ್ ಆರಂಭಿಸಿದ ಭಾರತದ ಪರ ಆರಂಭಿಕರು ಬೇಗನೆ ವಿಕೆಟ್ ಒಪ್ಪಿಸಿ ಪೆವಿಲಿಯನ್ ಸೇರಿಕೊಂಡರು ಯಶಸ್ವಿ ಜೈಸ್ವಾಲ್ (13) ಹಾಗೂ ಕೆ.ಎಲ್.ರಾಹುಲ್ (6) ರನ್‌ಗಳಿಸಿ ಔಟ್ ಆದರು. ಸದ್ಯ, 2 ರನ್ ಗಳಿಸಿರುವ ಸಾಯಿ ಸುದರ್ಶನ್ ಹಾಗೂ 4 ರನ್ ಗಳಿಸಿರುವ ಕುಲದೀಪ್ ಯಾದವ್ ಕ್ರೀಸ್‌ನಲ್ಲಿದ್ದಾರೆ.

ದಕ್ಷಿಣ ಆಫ್ರಿಕಾ ಪರ ಮಾರ್ಕೊ ಯಾನ್ಸನ್ ಹಾಗೂ ಸೈಮನ್ ಹಾರ್ಮರ್ ತಲಾ ಒಂದೊಂದು ವಿಕೆಟ್ ಪಡೆದುಕೊಂಡರು.

ಮೊದಲ ಇನಿಂಗ್ಸ್‌ನ 288 ರನ್‌ಗಳ ಮುನ್ನಡೆಯೊಂದಿಗೆ 2ನೇ ಇನಿಂಗ್ಸ್ ಆರಂಭಿಸಿದ ದಕ್ಷಿಣ ಆಫ್ರಿಕಾ 260/5 ವಿಕೆಟ್ ಕಳೆದುಕೊಂಡಾಗ ಡಿಕ್ಲೇರ್ ಮಾಡಿಕೊಂಡಿತು. ಆ ಮೂಲಕ ಭಾರತ ಗೆಲುವಿಗೆ 549ರನ್‌ಗಳ ಬೃಹತ್ ಟಾರ್ಗೆಟ್ ನೀಡಿದೆ.

ರಯಾನ್ ರಿಕೆಲ್ಟನ್ (35) ಹಾಗೂ ಏಡೆನ್ ಮಾರ್ಕರಂ (29) ಮೊದಲ ವಿಕೆಟ್‌ಗೆ 59 ರನ್‌ಗಳ ಜೊತೆಯಾಟ ಕಟ್ಟಿದರು. ಈ ಜೋಡಿಯನ್ನು ಬೇರ್ಪಡಿಸುವಲ್ಲಿ ರವೀಂದ್ರ ಜಡೇಜ ಯಶಸ್ವಿಯಾದರು.

ನಾಯಕ ತೆಂಬ ಬವುಮಾ (3) ವಿಕೆಟ್ ಅನ್ನು ವಾಷಿಂಗ್ಟನ್ ಸುಂದರ್ ಕಬಳಿಸಿದರು. ಬಳಿಕ ಟ್ರಿಸ್ಟನ್ ಸ್ಟಬ್ಸ್ (94) ಹಾಗೂ ಟೋನಿ ಡಿ ಝೋರ್ಜಿ (49) ರನ್‌ಗಳಿಸಿದರು. ಆಲ್‌ರೌಂಡರ್ ವಿಯಾನ್ ಮುಲ್ಡರ್ ಕೂಡ (ಅಜೇಯ 35) ರನ್ ಗಳಿಸಿದರು.

ಭಾರತದ ಪರ ಉತ್ತಮ ಬೌಲಿಂಗ್ ದಾಳಿ ನಡೆಸಿದ ರವೀಂದ್ರ ಜಡೇಜ 4 ವಿಕೆಟ್ ಕಬಳಿಸಿದರು. ಹಾಗೂ ವಾಷಿಂಗ್‌ಟನ್ ಸುಂದರ್ 1 ವಿಕೆಟ್ ಪಡೆದುಕೊಂಡರು. ದಕ್ಷಿಣ ಆಫ್ರಿಕಾದ 489 ರನ್‌ಗಳಿಗೆ ಉತ್ತರವಾಗಿ ಭಾರತ ಮೊದಲ ಇನಿಂಗ್ಸ್ ನಲ್ಲಿ 201 ರನ್‌ಗಳಿಗೆ ತನ್ನೆಲ್ಲ ವಿಕೆಟ್‌ಗಳನ್ನು ಕಳೆದು ಕೊಂಡಿತು. ಆ ಮೂಲಕ ದ.ಆಫ್ರಿಕಾ ಮೊದಲ ಇನಿಂಗ್ಸ್‌ನಲ್ಲಿ 288 ರನ್‌ಗಳ ಮುನ್ನಡೆ ಗಳಿಸಿತು. ಆತಿಥೇಯರಿಗೆ ಫಾಲೋ ಆನ್ ಹೇರುವ ಅವಕಾಶ ಇದ್ದರೂ ದಕ್ಷಿಣ ಆಫ್ರಿಕಾ ದ್ವಿತೀಯ ಇನಿಂಗ್ಸ್ ಮುಂದುವರಿಸಲು ನಿರ್ಧರಿಸಿತ್ತು.

ಕೋಲ್ಕತ್ತಾದಲ್ಲಿ ನಡೆದ ಮೊದಲ ಪಂದ್ಯದಲ್ಲಿ ಸೋಲನುಭವಿಸಿದ್ದ ಭಾರತ, ಸರಣಿ ಸಮ ಬಲಗೊಳಿಸಲು ಈ ಪಂದ್ಯದಲ್ಲಿ ಗೆಲ್ಲಲೇಬೇಕಾದ ಒತ್ತಡದಲ್ಲಿದೆ.

## ಶಿವಾನಂದ ಪುರಿ ಶ್ರೀಗೆ ಅವಮಾನ: ಬಹಿರಂಗ ಕ್ಷಮೆಗೆ ಆಗ್ರಹ

• ಪ್ರಜೋದಯ ವರದಿ

**ಅರಸೀಕೆರೆ:** ನಗರದಲ್ಲಿ ಇತ್ತೀಚೆಗೆ ಹಮ್ಮಿಕೊಂಡಿದ್ದ ಕನಕದಾಸ ಜಯಂತಿಯಲ್ಲಿ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಕಾಗಿನೆಲೆ ಕನಕ ಗುರುಪೀಠದ ಶ್ರೀ ಶಿವಾನಂದ ಪುರಿ ಸ್ವಾಮೀಜಿ ಮಾತನಾಡುತ್ತಿದ್ದ ವೇಳೆ ಮೈಕ್ ಕಿತ್ತುಕೊಂಡು ಅವಮಾನ ಮಾಡಿದ್ದು ಕೂಡಲೇ ಸಮಾಜ ಹಾಗು ಶ್ರೀಗಳ ಕ್ಷಮೆಯಾಚಿಸಬೇಕೆಂದು ಒಬಿಸಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಂಗಳಾಪುರ ನಾಗರಾಜ್ ಅವರು ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಮಂಗಳವಾರ ಮಾತನಾಡಿ, ಗಂಡಸಿ ಹೋಬಳಿ ಗಂಗೆಮಡು ಸನ್ನಿಧಿಯಲ್ಲಿರುವ ಗಂಗಾಧರೇಶ್ವರ ಸ್ವಾಮಿ ಕ್ಷೇತ್ರದಲ್ಲಿ ಜನಪರ ಕೆಲಸ ಮಾಡಲು 50 ಲಕ್ಷ ರೂ. ನೀಡುವುದಾಗಿ ಚುನಾವಣಾ ವೇಳೆ ಶಾಸಕರು ಭರವಸೆ ನೀಡಿದ್ದರು. ಆದರೆ ಇದುವರೆಗೆ ಕಾರ್ಯರೂಪಕ್ಕೆ ಬಂದಿಲ್ಲ. ಸಭೆ, ಸಮಾರಂಭದಲ್ಲಿ ಸುಳ್ಳು ಹೇಳುವುದು ಸರಿಯಲ್ಲವೆಂದು ಸ್ವಾಮೀಜಿ ಹೇಳುತ್ತಿದ್ದಾಗ ದಿಢೀರನೇ ಬಂದ ಶಾಸಕರು ಮೈಕ್ ಕಸಿದು ಅವಮಾನಿಸಿದ್ದಾರೆಂದರು.

ವಿಧಾನಸಭಾ ಚುನಾವಣೆಯಲ್ಲಿ ಸತತ ನಾಲ್ಕು ಬಾರಿ ಗೆಲವು ಸಾಧಿಸಲು ಕುರುಬ ಸಮುದಾಯ ದೊಡ್ಡ ಕೊಡುಗೆ ನೀಡಿದೆ. ಸಮಾಜ ಬಾಂಧವರು ಅರ್ಥ ಮಾಡಿಕೊಳ್ಳಬೇಕು. ಶ್ರೀಗಳಿಗೆ ಅವಮಾನ ಮಾಡಿದ ಶಾಸಕರು ಕೂಡಲೇ ಕ್ಷಮೆಯಾಚಿಸ ಬೇಕು. ಇಲ್ಲದಿದ್ದರೆ ಹೋರಾಟಕ್ಕೆ ಕರೆ ಕೊಡಲಾಗುವುದೆಂದು ಎಚ್ಚರಿಕೆ ನೀಡಿದರು.

ಐತಿಹಾಸಿಕ ತಾಣ ಗಂಗೆಮಡು ಅಭಿವೃದ್ಧಿಗೆ ನೆರವು ನೀಡುವಂತೆ ನಾನು ಪತ್ರ ಬರೆದಿದ್ದ ಹಿನ್ನಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ 10 ಕೋಟಿ ರೂ. ಅನುದಾನ ಮೀಸಲಿರಿಸಿದ್ದು ಮೊದಲ ಹಂತದಲ್ಲಿ ನಾಲ್ಕೂವರೆ ಕೋಟಿ ರೂ. ಬಿಡುಗಡೆಗೆ ಆದೇಶ ಮಾಡಿದ್ದಾರೆ. ಸಣ್ಣ ನೀರಾವರಿ ಇಲಾಖೆ ಮೂಲಕ ಕಾಮಗಾರಿ ನಡೆಸಲು ಅನುವು ಮಾಡಿಕೊಟ್ಟಿದ್ದಾರೆ. ಅದನ್ನು ಸಹಿಸದೆ ಧಾರ್ಮಿಕ ಕಾರ್ಯಕ್ರಮದಲ್ಲಿ ಮನಬಂದಂತೆ ಮಾತನಾಡಿ ಎಲ್ಲರ ಗೌರವಕ್ಕೆ ತರುವ ಕೆಲಸ ಮಾಡಿರುವುದು ಖಂಡನೀಯ. ಶಾಸಕರ ಅಭಿವೃದ್ಧಿ ಕೆಲಸಗಳಿಗೆ ನಾವು ಅಡ್ಡಿಮಾಡುವುದಿಲ್ಲ. ಹಾಗೆಯೇ ಬೇರೆಯವರ ಕಾರ್ಯಗಳಿಗೆ ಅವರೂ ಅಡಚಣೆ ಮಾಡಬಾರದೆಂದರು.

ಡಿ.6ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲೆಗೆ ಆಗಮಿಸುತ್ತಿದ್ದು ನಡೆದಿರುವ ಎಲ್ಲಾ ವಿದ್ಯಮಾನಗಳನ್ನು ಅವರ ಗಮನಕ್ಕೆ ತರುತ್ತೇನೆಂದರು.



**ಕೊಣನೂರು: ಅರಕಲಗೂಡು ತಾಲ್ಲೂಕಿನ ಕೊಣನೂರು ಹೋಬಳಿ ಉಳ್ಳೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಹಾಗು ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಶಾಲಾ ಅಭಿವೃದ್ಧಿ ಸಮಿತಿ ಸದಸ್ಯರು ಹಾಗು ಕ್ಲಸ್ಟರ್ ಮಟ್ಟದ ಶಿಕ್ಷಕರು ಜ್ಯೋತಿ ಬೆಳಗಿಸುವ ಮೂಲಕ ಸಮಾರಂಭ ಉದ್ಘಾಟಿಸಿದರು. 1 ರಿಂದ 7ನೇ ತರಗತಿ ಮಕ್ಕಳು ವಿವಿಧ ಚಟುವಟಿಕೆ ಗಳಲ್ಲಿ ಭಾಗವಹಿಸಿ ಪ್ರತಿಭೆ ಪ್ರದರ್ಶಿಸಿದರು. ಚಿತ್ರಕಲೆ, ಆಶುಭಾಷಣ ಹಾಗು ಗಾಯನ, ಮಣ್ಣಿನಲ್ಲಿ ಕಲಾಕೃತಿ ರಚನೆ ಸ್ಪರ್ಧೆಗಳು ನಡೆದವು.**

### ಅಜ್ಲಾನ್ ಷಾ ಕಪ್ ಹಾಕಿ: ಬೆಲ್ಜಿಯಂಗೆ ಮಣಿದ ಭಾರತ

**ಇಪೋ (ಮಲೇಷ್ಯಾ):** ಭಾರತ ತಂಡ, ಸುಲ್ತಾನ್ ಅಜ್ಲಾನ್ ಷಾ ಕಪ್ ಹಾಕಿ ಪಂದ್ಯದಲ್ಲಿ ಮಂಗಳವಾರ ಕೆಚ್ಚಿನಿಂದ ಹೋರಾಟ ತೋರಿದರೂ ಅಂತಿಮವಾಗಿ 2-3 ಗೋಲುಗಳಿಂದ ಪ್ರಬಲ ಬೆಲ್ಜಿಯಂ ತಂಡಕ್ಕೆ ಮಣಿಯ ಬೇಕಾಯಿತು. ಅಭಿಷೇಕ್ (33ನೇ ನಿಮಿಷ), ಶಿಲಾನಂದ ಲಾಕ್ರಾ (57ನೇ ನಿಮಿಷ) ಅವರು ಭಾರತ ತಂಡದ ಪರ ಗೋಲು ಗಳಿಸಿದರು. ಬೆಲ್ಜಿಯಂ ಪರ ರೋಮನ್ ದುವೆಕೋಟ್(17 ಮತ್ತು 57ನೇ ನಿಮಿಷ) ಮತ್ತು ನಿಕೋಲಸ್ ಡಿ ಕೆರ್ಪೆಲ್ 45ನೇ ನಿಮಿಷ ಚೆಂಡನ್ನು ಗುರಿ ತಲುಪಿಸಿದರು.

ಜಾಹಿರಾತಿಗಾಗಿ ಸಂಪರ್ಕಿಸಿ
8747042279

HOUSE FOR SALE
A newly constructed house with site measuring 20' NS×30' EW and 3 storeyed house with 1800 sqft located at NH 75 B.M road bypass Bommanayakanhalli extn. Ward no.35, Hassan is for sale.
Contact
9448126779
8088349615

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019